Kannada Prabha • Daily • Saturday • 09.05.2026 • Volume 60 • Issue 128 • Pages 14+12 • Price ₹7 Shivamogga

ಕನ್ನಡಪ್ರಭ

ನೇರ.ದಿಟ್ಟ.ನಿರಂತರ



ಭಾರತ ಟಿ20 ತಂಡದ ನಾಯಕ ಸ್ಥಾನಕ್ಕೆ ಶ್ರೇಯರ್ ಅಯ್ಯರ್?

ಬ್ಯಾಟಿಂಗ್‌ನಲ್ಲಿ ಹಾಲಿ ನಾಯಕ ಸೂರ್ಯಕುಮಾರ್ ಯಾದವ್ ಸತತ ವೈಫಲ್ಯ ಹಿನ್ನೆಲೆ. ಭಾರತ ಟಿ20 ತಂಡದ ನಾಯಕತ್ವ ಶ್ರೇಯಸ್ ಅಯ್ಯರ್‌ಗೆ ವಹಿಸುವ ಸಾಧ್ಯತೆ. ಐಪಿಎಲ್, ದೇಸಿ ಟೂರ್ನಿಗಳಲ್ಲಿ ಉತ್ತಮ ಸಾಧನೆ ತೋರುತ್ತಿರುವ ಶ್ರೇಯಸ್. 10



www.KannadaPrabha.in ಶನಿವಾರ 9.05.2026 • ಬೆಂಗಳೂರು • ಬೆಳಗಾವಿ • ಶಿವಮೊಗ್ಗ • ಹುಬ್ಬಳ್ಳಿ • ಮಂಗಳೂರು • ಕಲಬುರಗಿ Kannada Prabha • Daily • Saturday • 09.05.2026 • Volume 60 • Issue 128 • Pages 14+12 • Price ₹7 Shivamogga

ಕನ್ನಡಪ್ರಭ

ನೇರ.ದಿಟ್ಟ.ನಿರಂತರ



₹40 ಕೋಟಿ ತೆರಿಗೆ: ಜಾರ್ಖಂಡ್ ಬಿಹಾರ ವಲಯಕ್ಕೆ ಧೋನಿ ನಂ.1

ಪ್ರಸಕ್ತ ಹಣಕಾಸು ವರ್ಷದಲ್ಲಿ ₹40 ಕೋಟಿ ತೆರಿಗೆ ಪಾವತಿಸಿದ ಕ್ರಿಕೆಟಿಗ ಮಹೇಂದ್ರ ಸಿಂಗ್ ಧೋನಿ. ಈ ಮೂಲಕ ಬಿಹಾರ, ಜಾರ್ಖಂಡ್ ತೆರಿಗೆ ವಲಯದಲ್ಲೇ ನಂ.1 ತೆರಿಗೆದಾರನೆಂಬ ಹಿರಿಮೆಗೆ ಜಾರ್ಖಂಡ್ ಮೂಲದ ಕ್ರಿಕೆಟಿಗ ಪಾತ್ರ. 12



ಅಸ್ಸಾಂ, ಬಂಗಾಳದಲ್ಲೂ ಬಿಜೆಪಿ ಮತ ಚೋರಿ: ರಾಹುಲ್ ಆರೋಪ ↘ 11



ಹನಿಟ್ರ್ಯಾಪ್ ಕುರಿತು ನಿಗಾ ಇಟ್ಟಿರಿ: ಆಟಗಾರರಿಗೆ ಬಿಸಿಸಿಐ ಎಚ್ಚರಿಕೆ! ↘ 12



ವಂದೇ ಮಾತರಂಗೆ ರಾಷ್ಟ್ರಗೀತೆ ರೀತಿ ರಕ್ಷಣೆ ಸರಿಯಲ್ಲ: ಓವೈಸಿ ↘ 11



ವೆಚ್ಚ ಕಡಿತ: ಏರಿಂಡಿಯಾದ ಸಿಬ್ಬಂದಿ ವೇತನ ಹೆಚ್ಚಳ ವಿಳಂಬ ↘ 11

ಬಿಎಸ್‌ವೈ ಸುವರ್ಣೋತ್ಸವ

ಇಂದಿನ ಸಂಚಿಕೆ ಜತೆ 12 ಪುಟಗಳ ವಿಶೇಷ ಪುರವಣಿ





ಚಿತ್ರದುರ್ಗದಲ್ಲಿಂದು ಬಿಎಸ್‌ವೈ ಅಭಿಮಾನೋತ್ಸಾಹ!

ಬಿಎಸ್‌ವೈ ರಾಜಕೀಯಕ್ಕೆ 50 ವರ್ಷ | ಮಧ್ಯಾಹ್ನ 12 ಗಂಟೆಗೆ ಕಾರ್ಯಕ್ರಮಕ್ಕೆ ಚಾಲನೆ | ಅಮಿತ್ ಶಾ ಭಾಗಿ

• **ರಮೇಶ್ ಬಿದರಕೆರೆ**
ಕನ್ನಡಪ್ರಭ ವಾರ್ತೆ ಚಿತ್ರದುರ್ಗ

ಕರ್ನಾಟಕದ ಜನಪ್ರಿಯ ಜನನಾಯಕ, ರೈತ ಪರ ಹೋರಾಟಗಾರ, ಕರ್ನಾಟಕದಲ್ಲಿ ಬಿಜೆಪಿ ಕಟ್ಟಿ ಬೆಳೆಸಿ, ದಕ್ಷಿಣ ಭಾರತದಲ್ಲಿ ಮೊದಲ ಸಲ ಬಿಜೆಪಿ ಸರ್ಕಾರ ಅಧಿಕಾರಕ್ಕೆ ತಂದ ನಾಯಕ ಬಿ.ಎಸ್.ಯಡಿಯೂರಪ್ಪ ರಾಜಕಾರಣಕ್ಕೆ ಬಂದು ಭರ್ತಿ ಅರ್ಧ ಶತಮಾನ ತುಂಬಿದ ಸಂತಸದ ಘಳಿಗೆಯನ್ನು ಸಾಕಾರಗೊಳಿಸಲು ಕೋಟೆನಾಡು ಚಿತ್ರದುರ್ಗದಲ್ಲಿ ಏ. 9ರಂದು ಆಯೋಜಿಸಿರುವ ಅಭಿಮಾನೋತ್ಸವದ ಸಿದ್ಧತೆಗಳು ಪೂರ್ಣಗೊಂಡಿವೆ.

ಚಿತ್ರದುರ್ಗದ ದಾವಣಗೆರೆ ರಸ್ತೆಯ ಶ್ರೀ ಮಾದಾರ ಚನ್ನಯ್ಯ ಗುರುಪೀಠದ ಹಿಂಭಾಗದಲ್ಲಿ 60 ಎಕರೆಗೂ ಹೆಚ್ಚು ಜಾಗದಲ್ಲಿ ಕಾರ್ಯಕ್ರಮಕ್ಕೆ ಕ್ಷಣಗಣನೆ ಆರಂಭವಾಗಿದೆ. ಇಡೀ ಕಾರ್ಯಕ್ರಮದ ಉಸ್ತುವಾರಿಯನ್ನು ಶಾಸಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಹಿಸಿಕೊಂಡಿದ್ದಾರೆ.

ತಂದೆಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಸದ ಬಿ.ವೈ.ರಾಘವೇಂದ್ರ ಅವರು ಟೊಂಕಕಟ್ಟಿ ನಿಂತಿದ್ದಾರೆ. ಮಧ್ಯಾಹ್ನ 12 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ↘ 15

1 ಲಕ್ಷ ಕಾರ್ಯಕ್ರಮದ ಪ್ರಧಾನ ವೇದಿಕೆಯಲ್ಲಿ ಒಂದು ಲಕ್ಷ ಆಸನ ವ್ಯವಸ್ಥೆ

10 ಲಕ್ಷ ಕಾರ್ಯಕ್ರಮಕ್ಕೆ ಭಾಗಿಯಾಗುವ ಅಭಿಮಾನಿಗಳ ಸಂಖ್ಯೆ 10 ಲಕ್ಷ

250 ಊಟದ ಸಿದ್ಧತೆಗಾಗಿ ಬಾಣಸಿಗರು

200 ಇಷ್ಟು ಮಂದಿ ಮಠಾಧೀಶರು ಕಾರ್ಯಕ್ರಮದಲ್ಲಿ ಭಾಗಿ

112 ಕಾರ್ಯಕ್ರಮಕ್ಕಾಗಿ ಇಷ್ಟು ಅಡಿ ಉದ್ದದ ವೇದಿಕೆ ಸಿದ್ಧ

2500 ಭದ್ರತೆಗಾಗಿ ಪೊಲೀಸರ ನಿಯೋಜನೆ

ಬಿಎಸ್‌ವೈ ಕಾರು ಪ್ರದರ್ಶನ

ದಶಕಗಳ ಹಿಂದೆ ಪಕ್ಷ ಕಟ್ಟುವಾಗ ಬಿಎಸ್‌ವೈ ಅವರು ರಾಜ್ಯಪ್ರವಾಸಕ್ಕೆ ಬಳಸುತ್ತಿದ್ದ ಅಂಬಾಸಿಡರ್‌ಕಾರನ್ನು ಕಾರ್ಯಕ್ರಮ ನಡೆಸುವ ಸ್ಥಳದಲ್ಲಿ ಪ್ರದರ್ಶಿಸಲಾಗಿದೆ.

24 ತಮಟೆಗಳ ಬೃಹತ್ ಹಾರ

ಶುಕ್ರವಾರ ಚಿತ್ರದುರ್ಗದಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಪುರಪ್ರವೇಶ ವೇಳೆ ಮಾದಿಗ ಸಮುದಾಯದ ಮುಖಂಡರು 40 ಅಡಿ ಎತ್ತರದ 24 ತಮಟೆಗಳಿದ್ದ ಹಾರ ಹಾಕಿದರು

ಪುದುಚೇರಿ ಸಿಎಂ ಆಗಿ ರಂಗಸ್ವಾಮಿ 13ಕ್ಕೆ ಪ್ರಮಾಣ

ಪುದುಚೇರಿ: ಪುದುಚೇರಿಯಲ್ಲಿ ಎನ್‌ಡಿಎ ಕೂಟದ ಎಐಎನ್‌ಆರ್‌ಸಿ ಪಕ್ಷದ ನಾಯಕ ರಂಗಸಾಮಿ ಶಾಸಕಾಂಗ ಪಕ್ಷದ ನಾಯಕನಾಗಿ ಪುನಾರಾಯ್ಕೆ ಆಗಿದ್ದಾರೆ. ಮೇ13ರಂದು ರಂಗಸಾಮಿ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆಯಿದೆ. ವಿವರ ↘ 11

ತೆಲಂಗಾಣ ಶಾಲೆಗಾಗಿ 800 ವರ್ಷ ಹಳೆಯ ಶಿವ ದೇಗುಲ ಧ್ವಂಸ

ವಾರಂಗಲ್: ಸರ್ಕಾರಿ ಶಾಲೆಯ ನಿರ್ಮಾಣಕ್ಕಾಗಿ ಕಾಕತಿಯ ಕಾಲದ 800 ವರ್ಷ ಪುರಾತನ ಶಿವನ ದೇಗುಲವೊಂದನ್ನು ಇಲ್ಲಿನ ಖಾನಾಪುರ ಮಂಡಲದ ಅಶೋಕ ನಗರದಲ್ಲಿ ಧ್ವಂಸಗೊಳಿಸಲಾಗಿದೆ. ಇದಕ್ಕೆ ಸ್ಥಳೀಯರ ಭಾರೀ ಆಕ್ರೋಶ. ವಿವರ ↘ 11

ಮಧ್ಯಪ್ರಾಚ್ಯ ಬಿಕ್ಕಟ್ಟು: ತೈಲ ಕಂಪನಿಗಳಿಗೆ 30000 ಕೋಟಿ ನಷ್ಟ

ನವದೆಹಲಿ: ಮಧ್ಯಪ್ರಾಚ್ಯ ಸಂಘರ್ಷದ ಬಳಿಕ ಕಚ್ಚಾತೈಲದ ಬೆಲೆ ಏರಿಕೆಯಾದರೂ ಸ್ಥಳೀಯವಾಗಿ ದರ ಏರಿಸದ ಹಿನ್ನೆಲೆಯಲ್ಲಿ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳಿಗೆ ಮಾರ್ಚ್ ಬಳಿಕ 30000 ಕೋಟಿ ರು.ನಷ್ಟು ಭಾರೀ ನಷ್ಟ. ವಿವರ ↘ 11

ಮೇ 15ರ ಒಳಗೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಸಂಭವ

ನವದೆಹಲಿ: ಕಚ್ಚಾತೈಲ ಬೆಲೆ ಗಗನಕ್ಕೇರಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಮೇ15ರೊಳಗೆ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳ ಮಾಡಲಿದೆ ಎನ್ನಲಾಗಿದೆ. ಯುದ್ಧಾರಂಭದ ವೇಳೆ ಬ್ಯಾರೆಲ್‌ಗೆ 70 ಡಾಲರ್ ಇದ್ದ ಕಚ್ಚಾತೈಲ ಬೆಲೆ ಈಗ 110 ಡಾಲರ್‌ದಾಟಿದೆ. ವಿವರ ↘ 12

ಶೃಂಗೇರಿ ಅಂಚೆ ಮರುಮತ ಎಣಿಕೆ: ಕಾಂಗ್ರೆಸ್ ಸುಪ್ರೀಂಗೆ

ನವದೆಹಲಿ: ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಮರು ಎಣಿಕೆ ಫಲಿತಾಂಶದ ವಿರುದ್ಧ ಇದೀಗ ಟಿ.ಡಿ.ರಾಜೇಗೌಡ ಸುಪ್ರೀಂ ಕೋರ್ಟ್ ಮೋರೆ ಹೋಗಿದ್ದಾರೆ. ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ಸೋಮವಾರ ವಿಚಾರಣೆ ಬರುವ ಸಾಧ್ಯತೆ ಇದೆ. ವಿವರ ↘ 8

ವಿಜಯಕ್ಕೆ 118 ಸಮಸ್ಯೆ!

3ನೇ ಬಾರಿ ಗೌರ್ನರ್ ಭೇಟಿಯಾದ ವಿಜಯ್ | ಬಹುಮತಕ್ಕೆ 2 ಕೊರತೆ
ಇಂದೂ ಪ್ರಮಾಣವಚನ ಸ್ವೀಕಾರ ಇಲ್ಲ | ತಮಿಳುನಾಡಿನಲ್ಲಿ ಹೈಡ್ರಾಮಾ

• **ಪಿಟಿಐ** ಚೆನ್ನೈ

ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ಹಾಗೂ ನಟ ವಿಜಯ್‌ಗೆ ತಮಿಳುನಾಡಿನ ಮುಖ್ಯಮಂತ್ರಿ ಆಗುವ ಯೋಗ ಇನ್ನೂ ತೂಗುಯ್ಯಾಲೆಯಲ್ಲಿದೆ. ಬಹುಮತಕ್ಕೆ ಬೇಕಾದ 118 ಶಾಸಕರ ಪಟ್ಟಿಯನ್ನು ಸಲ್ಲಿಸಲು ಪುನಃ ವಿಜಯ್ ವಿಫಲರಾಗಿದ್ದಾರೆ ಎಂದು ಹೇಳಲಾಗಿದೆ. ಹೀಗಾಗಿ ಶನಿವಾರ ಅವರು ಪ್ರಮಾಣ ವಚನ ಸ್ವೀಕರಿಸುವುದು ಅನುಮಾನವಾಗಿದೆ.

ಶುಕ್ರವಾರ ಸಂಜೆ ವಿಜಯ್ 3ನೇ ಬಾರಿಗೆ ರಾಜ್ಯಪಾಲ ರಾಜೇಂದ್ರ ಅರ್ಲೇಕರ್‌ರನ್ನು ಭೇಟಿ ಮಾಡಿ ಶಾಸಕರ ಬೆಂಬಲ ಪತ್ರ ಸಲ್ಲಿಸಿದರು. ಬಳಿಕ ಶನಿವಾರ ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ನಿರೀಕ್ಷೆ ಇತ್ತು.

ಆದರೆ ನಾಟಕೀಯ ವಿದ್ಯಮಾನದಲ್ಲಿ, ವಿಜಯ್ ಅವರು ಅಗತ್ಯ ಬಹುಮತಕ್ಕೆ ಬೇಕಾದ 118ರ ಬದಲು ಕೇವಲ 116 ಶಾಸಕರ ಬೆಂಬಲ ಪತ್ರ ಸಲ್ಲಿಸಿದ್ದು, ಇನ್ನೂ 2 ಸ್ಥಾನಗಳ ಕೊರತೆ ಎದುರಿಸುತ್ತಿದ್ದಾರೆ ಎಂದು ಗೊತ್ತಾಗಿದೆ. ಹೀಗಾಗಿ ಅವರನ್ನು ಸರ್ಕಾರ ರಚನೆಗೆ ಆಹ್ವಾನಿಸಲು ರಾಜ್ಯಪಾಲರು ನಿರಾಕರಿಸಿದ್ದಾರೆ ಎಂದು ಮೂಲಗಳು ಹೇಳಿವೆ.

ಡಿಸಿಎಂ ಸ್ಥಾನ ಕೋರಿದ ವಿಸಿಕೆ: 234 ಸ್ಥಾನಗಳ ಪೈಕಿ 108 ಸ್ಥಾನ ಗೆದ್ದಿರುವ ಟಿವಿಕೆಗೆ ಬಹುಮತಕ್ಕೆ 118 ಸ್ಥಾನದ ಅಗತ್ಯವಿತ್ತು. ಕಾಂಗ್ರೆಸ್‌ನ 5 ಶಾಸಕರು 3 ದಿನ ಹಿಂದೆ ಟಿವಿಕೆ ಬೆಂಬಲಿಸಿದ್ದರು. ಈ ಮೂಲಕ ಅವರ ಬಲ 112ಕ್ಕೇರಿತ್ತು. ↘ 15



- ಟಿವಿಕೆಯ 107, ಕಾಂಗ್ರೆಸ್‌ನ 5, ಎಡಪಕ್ಷಗಳ 4 ಸೇರಿ ಟಿವಿಕೆ ಬಲ 116ಕ್ಕೆ ಏರಿಕೆ
- ಆದರೆ ಡಿಸಿಎಂ ಸ್ಥಾನಕ್ಕೆ ಪಟ್ಟು ಹಿಡಿದ ವಿಸಿಕೆಯಿಂದ ಇನ್ನೂ ಬೆಂಬಲ ಪ್ರಕಟ ಇಲ್ಲ
- ಹೀಗಾಗಿ ಶುಕ್ರವಾರ ಗೌರ್ನರ್ ಭೇಟಿ ವೇಳೆ 118 ಹೆಸರು ಸಲ್ಲಿಕೆಗೆ ವಿಜಯ್ ವಿಫಲ
- ಪರಿಣಾಮ ಸರ್ಕಾರ ರಚನೆಗೆ ವಿಜಯ್‌ಗೆ ಅನುಮತಿ ನೀಡಲು ಗೌರ್ನರ್ ನಕಾರ
- ಹೀಗಾಗಿ ಶನಿವಾರ ಶಪಥ ಇಲ್ಲ

ಕಾಂಗ್ರೆಸ್ಸಿನ ಎಲ್ಲಾ ಐವರು ಶಾಸಕರು ಬೆಂಗಳೂರಿಗೆ

ಚೆನ್ನೈ: ತಮಿಳುನಾಡು ಸರ್ಕಾರ ರಚನೆ ಕಸರತ್ತು ರಾಜಕೀಯ ಈಗ ಕರ್ನಾಟಕಕ್ಕೂ ಪ್ರವೇಶಿಸಿದೆ. ವಿಜಯ್ ಅವರ ಟಿವಿಕೆಗೆ ಬೆಂಬಲ ಪ್ರಕಟಿಸಿರುವ ಎಲ್ಲ 5 ಕಾಂಗ್ರೆಸ್ ಶಾಸಕರು ಬೆಂಗಳೂರಿಗೆ ಬಂದಿದ್ದಾರೆ. ಕುದುರೆ ವ್ಯಾಪಾರ ತಪ್ಪಿಸಲು ಅವರನ್ನು ಕರ್ನಾಟಕ ಡಿಸಿಎಂ ಡಿ.ಕೆ. ಶಿವಕುಮಾರ್‌ಬೆಂಗಳೂರಿಗೆ ಕರೆಸಿಕೊಂಡು ರೆಸಾರ್ಟ್ ಒಂದರಲ್ಲಿ ಆಶ್ರಯ ಒದಗಿಸಿದ್ದಾರೆ ಎಂದು ಮಾಧ್ಯಮವೊಂದು ವರದಿ ಮಾಡಿದೆ.

ರಾಜ್ಯಪಾಲರೇಕೆ ವಿಜಯ್‌ಗೆ ಆಹ್ವಾನ ಕೊಡುತ್ತಿಲ್ಲ?

ಚೆನ್ನೈ: ಏಕೈಕ ದೊಡ್ಡ ಪಕ್ಷಕ್ಕೆ ರಾಜ್ಯಪಾಲರು ಸರ್ಕಾರ ರಚನೆಗೆ ಆಹ್ವಾನಿಸಬೇಕು ಎಂಬ ನಿಯಮ ಇದೆ. ಇಲ್ಲಿ ವಿಜಯ್ ಮೊದಲು ಸರ್ಕಾರ ರಚನೆಗೆ ಹಕ್ಕು ಮಂಡಿಸುವಾಗ ತಮ್ಮದು 'ಏಕೈಕ ದೊಡ್ಡ ಪಕ್ಷ' ಎಂದು ಹೇಳಿ 108 ಶಾಸಕರ ಬೆಂಬಲ ಪತ್ರ ಕೊಟ್ಟಿದ್ದರೆ ಸಾಕಿತ್ತು.

ಅದನ್ನು ರಾಜ್ಯಪಾಲರು ಮನ್ನಿಸುವ ಸಾಧ್ಯತೆಯೂ ಇತ್ತು ಎಂದು ತಜ್ಞರು ಹೇಳಿದ್ದಾರೆ. 'ಆದರೆ ಅವರು ಕಾಂಗ್ರೆಸ್‌ನ 5 ಶಾಸಕರ ಬೆಂಬಲ ಸೇರಿ 112 ಶಾಸಕರ ಬೆಂಬಲ ಪತ್ರ ನೀಡಿದರು. ಇದು 'ಮೈತ್ರಿ ಸರ್ಕಾರ ರಚನೆಯ ಹಕ್ಕು ಮಂಡನೆ' ಎಂದು ರಾಜ್ಯಪಾಲರು ಭಾವಿಸಿದರು. ಹೀಗಾಗಿ ಅವರು 'ಮೈತ್ರಿ ಸರ್ಕಾರ ರಚನೆಗೆ 118 ಶಾಸಕರ ಬೆಂಬಲ ಬೇಕು' ಎಂದು ವಿಜಯ್‌ರನ್ನು ವಾಪಸು ಕಳಿಸಿದರು' ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಕಾಂಗ್ರೆಸ್ಸಿಂದ ನಮ್ಮನ್ನು ದೂರದಲ್ಲಿ ಕೂರಿಸಿ: ಸಂಸತ್‌ಗೆ ಡಿಎಂಕೆ

ಸ್ಪೀಕರ್‌ಗೆ ಕನಿಮೋಳಿಯಿಂದ ಪತ್ರ ಇಂಡಿ ಕೂಟಕ್ಕೂ ವಿದಾಯ ಸಂಭವ

ಚೆನ್ನೈ: ಟಿವಿಕೆ ಜತೆ ಕಾಂಗ್ರೆಸ್ ಪಕ್ಷದ ಮೈತ್ರಿ ಬಹುಕಾಲದ ಮಿತ್ರ ಡಿಎಂಕೆಯನ್ನು ಸಿಟ್ಟಿಗೆಬ್ಬಿಸಿದ್ದು ರಾಷ್ಟ್ರದಲ್ಲೇ ಮೈತ್ರಿ ಕಡಿತಕ್ಕೆ ಮುಂದಾದಂತಿದೆ. ಇದರ ಮೊದಲ ಸಂಕೇತವಾಗಿ ಗುರುವಾರ ನಡೆದ ಡಿಎಂಕೆ ಸಭೆಯಲ್ಲಿ ಕಾಂಗ್ರೆಸ್‌ವಿರುದ್ಧಆಕ್ರೋಶವ್ಯಕ್ತಪಡಿಸಲಾಗಿದೆ. ಇನ್ನೊಂದು ಕಡೆ, 'ಲೋಕಸಭೆಯಲ್ಲಿ ಕಾಂಗ್ರೆಸ್ ಜತೆ ಇನ್ನು ನಾವು ಕೂರಲ್ಲ. ಪ್ರತ್ಯೇಕ ಆಸನ ವ್ಯವಸ್ಥೆ ಮಾಡಿ' ಎಂದು ಸದನದ ಸ್ಪೀಕರ್‌ಗೆ ಡಿಎಂಕೆ ಸಂಸದೆ ಕನಿಮೋಳಿ ಪತ್ರ ಬರೆದಿದ್ದಾರೆ. ಕಾಂಗ್ರೆಸ್ ಜತೆ ಡಿಎಂಕೆ ಮೈತ್ರಿ ಕಡಿದುಕೊಂಡರೆ ವಿಪಕ್ಷಗಳ ಇಂಡಿಯಾ ಕೂಟದಿಂದ ಕೂಡ ಅದು ಹೊರಬಂದಂತೆ ಎನ್ನಲಾಗುತ್ತಿದೆ.



ಸ್ಟಾಲಿನ್‌ಗೆ ಬೇಸರ: ಕಾಂಗ್ರೆಸ್ ನಡೆ ಬಗ್ಗೆ ಮಾತನಾಡಿದ ಡಿಎಂಕೆ ನಾಯಕರೊಬ್ಬರು, ಪಕ್ಷದ ನಾಯಕ ಎಂ.ಕೆ. ಸ್ಟಾಲಿನ್ ತೀವ್ರ ಬೇಸರಗೊಂಡಿದ್ದಾರೆ ಎಂದಿದ್ದಾರೆ. 'ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು, ಕಾಂಗ್ರೆಸ್‌ನಿಂದ ಬಿಜೆಪಿಗೆ ಸೇರ್ಪಡೆಗೊಂಡಿದ್ದಕ್ಕಾಗಿ ಅವರನ್ನು ನೀವು (ರಾಹುಲ್ ಗಾಂಧಿ) ದೇಶದ್ರೋಹಿ ಎಂದು ಕರೆದಿದ್ದೀರಿ. ↘ 15

ಡಿಎಂಕೆಗೇಕೆ ಸಿಟ್ಟು?

- ಹಲವು ವರ್ಷಗಳಿಂದ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಕಾಂಗ್ರೆಸ್ ಜತೆ ಮೈತ್ರಿ ಹೊಂದಿದ್ದ ಡಿಎಂಕೆ
- ಆದರೆ ತ.ನಾಡು ಚುನಾವಣೆ ಬಳಿಕ ವಿಜಯ್‌ರ ಟಿವಿಕೆ ಪಕ್ಷ ಬೆಂಬಲಿಸಿದ್ದ ಕಾಂಗ್ರೆಸ್
- ಕಾಂಗ್ರೆಸ್‌ನ ಈ ನಡೆ ಬಗ್ಗೆ ಡಿಎಂಕೆ ಮೈತ್ರಿಕೂಟದ ಸಭೆಯಲ್ಲಿ ಸಿಎಂ ಸ್ಟಾಲಿನ್ ಕಿಡಿ
- ಕಷ್ಟದ ಸಮಯದಲ್ಲಿ ಹಲವು ಬಾರಿ ಬೆಂಬಲಿಸಿದ್ದರೂ ಇದೀಗ ಕಾಂಗ್ರೆಸ್ ಕೈಕೊಟ್ಟ ಆರೋಪ
- ಹೀಗಾಗಿ ಲೋಕಸಭೇಲಿ ಪ್ರತ್ಯೇಕ ಸ್ಥಾನಕ್ಕಾಗಿ ಸ್ಪೀಕರ್ ಡಿಎಂಕೆ ನಾಯಕರ ಮನವಿ
- ಶೀಘ್ರವೇ ಕಾಂಗ್ರೆಸ್ ನೇತೃತ್ವದ ಇಂಡಿಯಾ ಕೂಟಕ್ಕೂ ಡಿಎಂಕೆ ವಿದಾಯ ಹೇಳುವ ಸಂಭವ

ರಾಜಕೀಯ ಶಕ್ತಿ ಬಳಸಿ ಐಪಿಎಲ್ ಶಿಫ್ಟ್: ಡಿಕೆಶಿ

ಬಿಸಿಸಿಐನ ಉಚಿತ ಟಿಕೆಟ್ ವಾದ ಬೋಗಸ್ ಗುಜರಾತ್ ಲಾಭಕ್ಕಾಗಿ ಫೈನಲ್ ಸ್ಥಳ ಬದಲು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಐಪಿಎಲ್ ಫೈನಲ್ ಪಂದ್ಯ ಅಹಮದಾಬಾದ್‌ಗೆ ಸ್ಥಳಾಂತರಿಸಿರುವ ವಿಚಾರದಲ್ಲಿ ಬಿಸಿಸಿಐ ಸುಳ್ಳು ಹೇಳುತ್ತಿದೆ. ರಾಜಕೀಯ ಪ್ರಭಾವ ಬಳಸಿ ಫೈನಲ್ ಪಂದ್ಯ ಸ್ಥಳಾಂತರಿಸಿದ್ದು ಗುಜರಾತ್‌ನ ಲಾಭಕ್ಕಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ. ಜೊತೆಗೆ ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯ ವೀಕ್ಷಿಸಲು ಶಾಸಕರಿಗೆ ತಲಾ 2 ಟಿಕೆಟ್ ನೀಡುತ್ತಿದ್ದರು ಎಂದು ಹೇಳಿದ್ದಾರೆ. ವಿವರ ↘ 8



ರಾಜ್ಯ ಸರ್ಕಾರಕ್ಕಾಗಿ 1650 ಐಪಿಎಲ್ ಟಿಕೆಟ್ ಬೇಡಿಕೆ?

ಉಳಿದ ಟಿಕೆಟ್ ರಿಯಾಯಿತಿ ದರಕ್ಕೆ ಕೋರಿಕೆ 10000 ಎಕ್ಸ್ಟ್ರಾ ಟಿಕೆಟ್ ಬಗ್ಗೆ ಬಿಸಿಸಿಐ ಸ್ಪಷ್ಟನೆ

ಬೆಂಗಳೂರು: ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ, ಬಿಸಿಸಿಐ ಬಳಿ ಬೇಡಿಕೆ ಇಟ್ಟಿದ್ದ ಐಪಿಎಲ್ ಫೈನಲ್‌ನ 10000 ಹೆಚ್ಚುವರಿ ಟಿಕೆಟ್ ಪೈಕಿ ಶಾಸಕರು, ಸರ್ಕಾರ, ತಜ್ಞರ ಸಮಿತಿಗೆ ಕೊಡಬೇಕಿದ್ದಿದ್ದು 1650 ಉಚಿತ ಟಿಕೆಟ್. ಉಳಿದ ಟಿಕೆಟ್‌ಗಳನ್ನು ಕ್ಲಬ್‌ಗಳಿಗೆ, ಅವರ ಕುಟುಂಬ ಸದಸ್ಯರಿಗೆನೀಡಲುರಿಯಾಯಿತಿ ದರದಲ್ಲಿ ನೀಡುವಂತೆ ರಾಜ್ಯ ಕ್ರಿಕೆಟ್ ಸಂಸ್ಥೆ ಮನವಿ ಮಾಡಿತ್ತು ಎಂದು ಬಿಸಿಸಿಐ ಮೂಲಗಳು ತಿಳಿಸಿದ್ದಾಗಿ ಪಿಟಿಐ ಸುದ್ದಿಸಂಸ್ಥೆ ವರದಿ ಮಾಡಿದೆ. ವಿವರ ↘ 8



ಪ.ಬಂಗಾಳಕ್ಕೆ ಸುವೇಂದು ಮೊದಲ ಬಿಜೆಪಿ ಸಿಎಂ

ದೀದಿ ಸೋಲಿಸಿದವಗೆ ಗಾದಿ: ಇಂದು ಪ್ರಮಾಣ ಮೋದಿ, ಶಾ ಭಾಗಿ | ಮಹಿಳೆ ಸೇರಿ 2 ಡಿಸಿಎಂ?

ಕೋಲ್ಕತಾ: ಪಶ್ಚಿಮ ಬಂಗಾಳ ಬಿಜೆಪಿ ಶಾಸಕಾಂಗ ಪಕ್ಷದ ನಾಯಕನಾಗಿ ಸುವೇಂದು ಅಧಿಕಾರಿ ಅವರನ್ನು ಶುಕ್ರವಾರ ಆಯ್ಕೆ ಮಾಡಲಾಗಿದೆ. ಅವರು ಶನಿವಾರ ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆಯುವ ಪ್ರಮಾಣ ವಚನ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಇತರರು ಭಾಗಿಯಾಗ ಲಿದ್ದಾರೆ. ವಿವರ ↘ 11




ವಂಚನೆ ದಾಳಿ ಸ್ಥಳದಲ್ಲಿದ್ದ ಮಾಹಿತಿ ಮೂಲಕ ಬಹಿರಂಗ

ಸಿಂದೂರ ವೇಳೆ ಪಾಕ್‌ಗೆ ನೆರವು: ಮೊದಲ ಬಾರಿ ಚೀನಾ ಒಪ್ಪಿಗೆ

ಪಾಕ್ ದಾಳಿ ಮಾಡುವಾಗ ಸ್ಥಳದಲ್ಲಿದ್ದ ಚೀನೀ ತಂತ್ರಜ್ಞ

ನವದೆಹಲಿ: ಕಳೆದ ವರ್ಷ ಭಾರತ ನಡೆಸಿದ 'ಆಪರೇಷನ್ ಸಿಂದೂರ' ವೇಳೆ ಪಾಕಿಸ್ತಾನಕ್ಕೆ ತಾಂತ್ರಿಕ ನೆರವು ನೀಡಿದ್ದಾಗಿ ಮೊದಲ ಬಾರಿಗೆ ಚೀನಾ ಒಪ್ಪಿಕೊಂಡಿದೆ. ಚೀನಾದ ಸರ್ಕಾರಿ ಟೀವಿ ವಾಹಿನಿ 'ಸಿಸಿಟೀವಿ', ಚೀನಾದ ವಾಯುಯಾನ ಉದ್ಯಮ ನಿಗಮ (ಎವಿಐಸಿ) ಮತ್ತು ಸಂಶೋಧನಾ ಸಂಸ್ಥೆಯ ಎಂಜಿನಿಯರ್‌ಗಳ ಜತೆ ನಡೆಸಿದ ಸಂದರ್ಶನಗಳನ್ನು ಪ್ರಸಾರ ಮಾಡಿದ್ದು ಅದರಲ್ಲಿ, 4 ದಿನಗಳ ಯುದ್ಧದ ವೇಳೆ ಪಾಕಿಸ್ತಾನಿ ಸಿಬ್ಬಂದಿ ಜತೆ ಕೆಲಸ ಮಾಡಿದ ಬಗ್ಗೆ ಎಂಜಿನಿಯರ್‌ಜಾಂಗ್ ಹೆಂಗ್ ಮಾತನಾಡಿದ್ದಾರೆ.



'ನಾವು ಸಪೋರ್ಟ್ ಬೇಸ್‌ನಲ್ಲಿ ನಿರಂತರವಾಗಿ ಫೈಟರ್ ಜೆಟ್‌ಗಳ ಘರ್ಜನೆ ವಾಯುದಾಳಿಯ ಸೈರನ್‌ಗಳು ಮೊಳಗುವುದನ್ನು ಕೇಳಿದ್ದೇವೆ' ಎಂದಿದ್ದಾರೆ. ↘ 15

ಚೀನಾ ತಂತ್ರಜ್ಞ ಹೇಳಿದ್ದು

- ಚೀನಾದ ಸುದ್ದಿವಾಹಿನಿಯಲ್ಲಿ ಚೀನಾ ವೈಮಾನಿಕ ತಂತ್ರಜ್ಞರ ಸಂದರ್ಶನ ಪ್ರಸಾರ
- ಸಂದರ್ಶನದಲ್ಲಿ ಭಾರತದ ದಾಳಿಗೆ ತುತ್ತಾದ ಪಾಕ್ ಪ್ರದೇಶದಲ್ಲಿ ಇದ್ದ ಬಗ್ಗೆ ಸುಳಿವು
- ಸಪೋರ್ಟ್ ಬೇಸ್‌ನಲ್ಲಿ ಯುದ್ಧ ವಿಮಾನಗಳ ಭಾರೀ ಸದ್ದು ಕೇಳುತ್ತಿತ್ತೆಂದ ತಂತ್ರಜ್ಞ
- ಅಲ್ಲಿನ ಬೆಳವಣಿಗೆಯಿಂದ ದೈಹಿಕ, ಮಾನಸಿಕವಾಗಿ ಆಯಾಸದ ಬಗ್ಗೆ ಮಾಹಿತಿ
- ಇದು ಯುದ್ಧದ ವೇಳೆ ಪಾಕ್‌ಗೆ ಚೀನಾ ನೆರವು ನೀಡಿದ್ದಕ್ಕೆ ಸಾಕ್ಷ್ಯ ಎಂಬ ವಿಶ್ಲೇಷಣೆ

ಎಚ್ಚರಿಕೆ ವಿವಿಧ ಸಂಘಟನೆಗಳ ಜೊತೆ ಸಿಎಂ, ಡಿಸಿಎಂ ಸಭೆ

ಬಂಗಾಳ ಬೆನ್ನಲ್ಲೇ ರಾಜ್ಯದಲ್ಲೂ ಮತಪಟ್ಟಿ ಪರಿಷ್ಕರಣೆ ಅಲರ್ಟ್

ಮುನ್ನೆಚ್ಚರಿಕೆಗೆ ಸರ್ಕಾರಕ್ಕೆ ಸಂಘಟನೆಗಳಿಂದ ಮನವಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ದೇಶದ ವಿವಿಧ ರಾಜ್ಯಗಳಲ್ಲಿ ಚುನಾವಣಾ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯಿಂದ (ಎಸ್‌ಐಆರ್) ಉಂಟಾಗಿರುವ ಅನಾಹುತಗಳ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದ್ದು, ರಾಜ್ಯದಲ್ಲಿ ಸೂಕ್ತ ಮುನ್ನೆಚ್ಚರಿಕೆ ವಹಿಸಿ ಅರ್ಹರ ಮತದಾನದ ಹಕ್ಕು ಸಂರಕ್ಷಿಸಬೇಕು ಎಂದು ಚರ್ಚಿಸಲಾಗಿದೆ.



ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೇರಿ ಪ್ರಮುಖ ಸಚಿವರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ↘ 15

ಎಸ್‌ಐಆರ್‌ಗೆ ಆಕ್ಷೇಪ

- ಪ.ಬಂಗಾಳದಲ್ಲಿ ಭಾರೀ ವಿವಾದಕ್ಕೆ ಕಾರಣವಾಗಿದ್ದ ಮತಪಟ್ಟಿ ಪರಿಷ್ಕರಣೆ ಪ್ರಕ್ರಿಯೆ
- ರಾಜ್ಯದಲ್ಲೂ ಪರಿಷ್ಕರಣೆಗೆ ಪೂರ್ವ ಪ್ರಕ್ರಿಯೆಗಳಿಗೆ ಚುನಾವಣಾ ಆಯೋಗದ ಸಿದ್ಧತೆ ಶುರು
- ಈ ಹಿನ್ನೆಲೆಯಲ್ಲಿ ಸಿಎಂ, ಡಿಸಿಎಂ ಜೊತೆಗೆ ವಿವಿಧ ಸಂಘಟನೆಗಳಿಂದ ಸಮಾಲೋಚನೆ
- ರಾಜ್ಯದಲ್ಲಿ ಪರಿಷ್ಕರಣೆ ತಡೆ ಇಲ್ಲವೇ ಪ್ರಕ್ರಿಯೆ ಮೇಲೆ ತೀವ್ರ ನಿಗಾಕ್ಕೆ ಸರ್ಕಾರಕ್ಕೆ ಮನವಿ
- ಶಾಸಕರ ಜೊತೆಗೆ ಚರ್ಚಿಸಿ ಮತ್ತೊಮ್ಮೆ ನಿಮ್ಮೊಂದಿಗೆ ಸಮಾಲೋಚಿಸುವೆ: ಸಭೆಗೆ ಸಿಎಂ

ಹೋರ್ಮುಜ್‌ನಲ್ಲಿ ಇರಾನ್, ಅಮೆರಿಕ ಪರಸ್ಪರ ಗುಂಡೇಟು

ಕದನ ವಿರಾಮ ನಡುವೆ ಹಡಗಿನ ಮೇಲೆ ದಾಳಿ ಇರಾನಿಂದ ಕ್ಷಿಪಣಿ ದಾಳಿ: ಯುಎಇ ಆರೋಪ

ವಾಷಿಂಗ್ಟನ್: ಕದನ ವಿರಾಮದ ನಡುವೆಯೇ ಇರಾನ್ ಮತ್ತು ಅಮೆರಿಕದ ಪಡೆಗಳು ಗುರುವಾರ ರಾತ್ರಿ ಹಾಗೂ ಶುಕ್ರವಾರ ಸಂಜೆ 2 ಬಾರಿ ಹೋರ್ಮುಜ್ ಜಲಸಂಧಿಯಲ್ಲಿ ಪರಸ್ಪರರ ಮೇಲೆ ದಾಳಿ ನಡೆಸಿದ್ದು, ಮತ್ತೊಮ್ಮೆ ಯುದ್ಧಾತಂಕ ಸೃಷ್ಟಿಸಿದೆ. ಈ ದಾಳಿಗೆ ಇರಾನ್ ಮತ್ತು ಅಮೆರಿಕ ಪರಸ್ಪರರ ಮೇಲೆ ಆರೋಪ– ಪ್ರತ್ಯಾರೋಪ ಮಾಡಿವೆ. ಇಷ್ಟಾದರೂ ಜಲಸಂಧಿಯಲ್ಲಿ ಕದನ ವಿರಾಮ ಮುಂದುವರಿಯಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ಪಷ್ಟಪಡಿಸಿದ್ದಾರೆ. ↘ 15



ಏನು ನಡೆಯಿತು?

- ಸದ್ಯ ಅಮೆರಿಕ– ಇರಾನ್ ನಡುವೆ ಮಧ್ಯಪ್ರಾಚ್ಯದಲ್ಲಿ ಕದನ ವಿರಾಮ ಜಾರಿಯಲ್ಲಿ
- ಗುರುವಾರ, ಶುಕ್ರವಾರ ಹೋರ್ಮುಜ್ ಜಲಸಂಧಿಯಲ್ಲಿ ಪರಸ್ಪರರ ಹಡುಗುಗಳ ಮೇಲೆ ಗುಂಡಿನ ದಾಳಿ
- ಪರಸ್ಪರ ಮೇಲೆ ದಾಳಿ ಬಗ್ಗೆ ಅಮೆರಿಕ, ಇರಾನ್‌ನಿಂದ ಆರೋಪ, ಪ್ರತ್ಯಾರೋಪ
- ನಮ್ಮ ಮೇಲೆ ಇರಾನ್‌ನಿಂದ ಡ್ರೋನ್, ಕ್ಷಿಪಣಿ ದಾಳಿ: ಯುಎಇನಿಂದ ಆರೋಪ

Kannada Prabha • Daily • Saturday • 09.05.2026 • Volume 60 • Issue 128 • Pages 14+12 • Price ₹7 Shivamogga

ಕನ್ನಡಪ್ರಭ

ನೇರ.ದಿಟ್ಟ.ನಿರಂತರ

ಇಂದು ಅಭಿಮಾನೋತ್ಸವ | ಚಿತ್ರದುರ್ಗಕ್ಕೆ ಮಾಜಿ ಸಿಎಂ ಪ್ರವೇಶ

ಬಿಎಸ್‌ವೈಗೆ ಅದ್ದೂರಿ ಸ್ವಾಗತ

ಪೂರ್ಣಕುಂಭ ಹೊತ್ತು, ಕೈಯಲ್ಲಿ ಒನಕೆ ಹಿಡಿದು ಸ್ತ್ರೀಯರಿಂದ ಸಂಭ್ರಮ
'ಮಿನಿ ದಸರಾ' ಮಾದರಿಯಲ್ಲಿ ಕರುನಾಡಿನ ಜಾನಪದ ನೃತ್ಯಗಳ ವೈಭವ
ಸೇಬು, ತಮಟೆ ಹಾರ ಹಾಕಿ, ಹೂವುಮಳೆ ಸುರಿಸಿ ಬಿಎಸ್‌ವೈ ಮೆರವಣಿಗೆ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ರಾಜಕೀಯ ಜೀವನಕ್ಕೆ ಐವತ್ತು ವರ್ಷ ಸಂದ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿರುವ 'ಬಿಎಸ್‌ವೈ ಅಭಿಮಾನೋತ್ಸವ'ದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಯಡಿಯೂರಪ್ಪ ಅವರು ಶುಕ್ರವಾರ ಚಿತ್ರದುರ್ಗಕ್ಕೆ ಆಗಮಿಸಿದಾಗ ಕೋಟೆ ನಾಡಿನ ಜನ ಅದ್ದೂರಿಯಾಗಿ ಸ್ವಾಗತ ಕೋರಿದರು. 'ಮಿನಿ ದಸರಾ' ಮಾದರಿಯಲ್ಲಿ ಮೆರವಣಿಗೆ ಮಾಡಿದ್ದು ವಿಶೇಷವಾಗಿತ್ತು.

ಬಿಎಸ್‌ವೈ ಅದ್ದೂರಿ ಪುರಪ್ರವೇಶ: ಸಂಜೆ ನಾಲ್ಕು ಗಂಟೆಗೆ ಯಡಿಯೂರಪ್ಪ ಚಿತ್ರದುರ್ಗ ಪುರಪ್ರವೇಶ ಮಾಡಬೇಕಿತ್ತು. ಆದರೆ ಬಿಎಸ್‌ವೈ ಆಗಮನ ಆದಾಗ ಸೂರ್ಯ ನಿಧಾನವಾಗಿ ಮೋಡದಿಂದ ಮರೆಯಾಗುತ್ತಿದ್ದ. ಇದೇ ಗೋಧೂಳಿ ಸಮಯದಲ್ಲಿ ನೇರವಾಗಿ ಪುಷ್ಪಾಲಂಕೃತ ವಾಹನ ಏರಿದ ಯಡಿಯೂರಪ್ಪ ಅವರು ನೆರೆದಿದ್ದ ಅಭಿಮಾನಿ ಸಮೂಹದತ್ತ ಕೈ ಬೀಸಿದರು. ರಾಜಕೀಯ ನಾಯಕರು ಹಾಗೂ ರೈತರು ಗಾಳಿಯಲ್ಲಿ ಹಸಿರು ಶಾಲು ಬೀಸಿ ಯಡಿಯೂರಪ್ಪ ಅವರ ರೈತ ಪರ ಹೋರಾಟದ ನೆನಪು ಮಾಡಿದರು. ಸಾವಿರಕ್ಕೂ ಹೆಚ್ಚು ಮಂದಿ ಕೈಯಲ್ಲಿ ನೇಗಿಲು ಎತ್ತಿ ಹಿಡಿದು ಮೆರವಣಿಗೆಗೆ ಒಕ್ಕಲುತನದ ಸ್ಪರ್ಶ ನೀಡಿದರು. ಕ್ರೇನ್ ಸಹಾಯದಿಂದ ಬಿಎಸ್‌ವೈ ಅವರ ಮೇಲೆ ಹೂ ಮಳೆಗರೆಯಲಾಯಿತು.

ಯಡಿಯೂರಪ್ಪ ಅವರು ಪುಷ್ಪಾಲಂಕೃತ ಸಾರೋಟ್‌ನಲ್ಲಿ ಸಾಗಬೇಕಿತ್ತು. ಆದರೆ ಅವರ ಜೊತೆಗೆ ಬಹಳಷ್ಟು ನಾಯಕರು ಸಾಗುವುದು ಕಷ್ಟವೆಂಬ ಕಾರಣಕ್ಕೆ ವಾಹನವೊಂದಕ್ಕೆ ಪುಷ್ಪಾಲಂಕಾರ ಮಾಡಿ ಅದರಲ್ಲಿ ಬಿಎಸ್‌ವೈ ಅವರ ಮೆರಣಿಗೆ ನಡೆಸಲಾಯಿತು. ↘ 13



ಶುಕ್ರವಾರ ಚಿತ್ರದುರ್ಗ ನಗರ ಪ್ರವೇಶಿಸಿದ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ಅದ್ದೂರಿ ಸ್ವಾಗತ

ಕನ್ನಡಪ್ರಭ
ಶನಿವಾರ 9.05.2026

ಗರಿಷ್ಠ 36°c | ಕನಿಷ್ಠ 24°c

ಸುದ್ದಿ ಸಿಂಚನ

ಅಭಿಮಾನೋತ್ಸವಕ್ಕೆ ಕೆ.ಎಸ್.ಈಶ್ವರಪ್ಪರನ್ನು ಆಹ್ವಾನಿಸಿದ ಬಿವೈಆರ್

ಶಿವಮೊಗ್ಗ: ಜನನಾಯಕ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅರ್ಧ ಶತಮಾನದ ರಾಜಕೀಯ ಜೀವನಕ್ಕೆ ಅಭಿನಂದನೆ ಸಲ್ಲಿಸಲು ಚಿತ್ರದುರ್ಗದಲ್ಲಿ ಪಕ್ಷಾತೀತವಾಗಿ ನಡೆಯುತ್ತಿರುವ ಬೃಹತ್ ಅಭಿಮಾನೋತ್ಸವದಲ್ಲಿ ನಾಡಿನ ಎಲ್ಲ ಸ್ವಾಮೀಜಿಗಳು, ಸಂತರು, ಧಾರ್ಮಿಕ ಮುಖಂಡರು, ಕೇಂದ್ರ ಗೃಹ ಸಚಿವರು ಸೇರಿದಂತೆ ಗಣ್ಯಾತಿಗಣ್ಯರು ಪಾಲ್ಗೊಳ್ಳುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಹಿರಿಯರು, ಕರ್ನಾಟಕದ ಮಾಜಿ ಸಭಾಪತಿ ಡಿ.ಎಚ್. ಶಂಕರಮೂರ್ತಿ ಹಾಗೂ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಅವರನ್ನು ಸಂಸದ ಬಿ.ವೈ. ರಾಘವೇಂದ್ರ ಅವರು ಶುಕ್ರವಾರ ಅವರ ಮನೆಗೆ ತೆರಳಿ, ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್.ವೈ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದರು.

11ರಂದು ನೇರ ಸಂದರ್ಶನ

ಶಿವಮೊಗ್ಗ: ಶಿವಮೊಗ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ.11ರ ಬೆಳಗ್ಗೆ 10ಕ್ಕೆ ಪ್ರತಾಪ್ ಆರ್ಕಿಡ್, 2ನೇ ಮಹಡಿ, ದುರ್ಗಿಗುಡಿ ಜೈಲ್ ಸರ್ಕಲ್, ಡಿಸಿಬಿ ಬ್ಯಾಂಕ್ ಹತ್ತಿರ, ಶಿವಮೊಗ್ಗ ಇಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ರೇಜ್ ಮ್ಯಾನೇಜ್ಮೆಂಟ್ ಸಲ್ಯೂಷನ್ ಕಂಪನಿ ಭಾಗವಹಿಸಲಿದ್ದು, ತಮ್ಮಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ಅಭ್ಯರ್ಥಿ ಗಳನ್ನು ಆಯ್ಕೆ ಮಾಡಿಕೊಳ್ಳಲಿದ್ದಾರೆ. ಪಿಯುಸಿ ಮತ್ತು ಯಾವುದೇ ಡಿಗ್ರಿ ತೇರ್ಗಡೆ ಹೊಂದಿದ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ಬಯೋಡೆಟಾ ಮತ್ತು ಆಧಾರ್‌ಕಾರ್ಡ್ ಪ್ರತಿಯೊಂದಿಗೆ ಸಂದರ್ಶನದಲ್ಲಿ ಭಾಗವಹಿಸಬಹುದು. ಉಚಿತ ಪ್ರವೇಶ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗುತ್ಯಪ್ಪ ಕಾಲೋನಿ, 2ನೇ ಕ್ರಾಸ್, ಪಂಪ ನಗರ, ಸಾಗರ ರಸ್ತೆ, ಶಿವಮೊಗ್ಗ ಇವರನ್ನು ಖುದ್ದಾಗಿ ಅಥವಾ ಮೊಬೈಲ್ ಸಂಖ್ಯೆ 9380663606/ 910823 5132 ಗಳನ್ನು ಸಂಪರ್ಕಿಸುವಂತೆ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಅರ್ಜಿಗಳ ಆಹ್ವಾನ

ಶಿವಮೊಗ್ಗ: ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮವು 2026-27ನೇ ಸಾಲಿನ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಹೊಸದಾಗಿ ಆಯ್ಕೆಯಾದ ವಿದ್ಯಾರ್ಥಿ ಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಆಯ್ಕೆಯಾದ ಸಿಇಟಿ/ಎನ್ಇಟಿ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳಾದ ಎಂಬಿಬಿಎಸ್, ಬಿಡಿಎಸ್, ಬಿಇ/ಬಿಟೆಕ್, ಆಯುಷ್, ಆರ್ಕಿಟೆಕ್ಚರ್, ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶುಸಂಗೋಪನೆ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಲು ಈ ಸಾಲ ಸೌಲಭ್ಯ ದೊರೆಯಲಿದೆ. ಮುಸ್ಲಿಂ, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಆಂಗ್ಲೋ-ಇಂಡಿಯನ್ ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿಗಳನ್ನು ಮೇ 08 ರಿಂದ 31 ರವರೆಗೆ ಆನ್‌ಲೈನ್ ಮೂಲಕ ನಿಗಮದ ವೆಬ್‌ಸೈಟ್ www.kmdconline.karnataka.gov.in ನಲ್ಲಿ ಅರ್ಜಿ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ, ಅದರ ಪ್ರಿಂಟೌಟ್ ನೊಂದಿಗೆ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಅಂಕಪಟ್ಟಿಗಳು, ಆಧಾರ್‌ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ವಾರ್ಷಿಕ ಆದಾಯ 8 ಲಕ್ಷ ರೂಪಾಯಿಗಳಿಗಿಂತ ಕಡಿಮೆ ಇರಬೇಕು), ವಿದ್ಯಾರ್ಥಿ ಮತ್ತು ಪೋಷಕರ ಭಾವಚಿತ್ರಗಳು. ಸಿಇಟಿ/ ಎನ್ ಇ ಇ ಟಿ ಹಾಲ್ ಟಿಕೆಟ್, ನೋಟರಿಯಿಂದ ದೃಢೀಕರಿಸಲ್ಪಟ್ಟ ಇಂಡೆಮ್ನಿಟಿ ಬಾಂಡ್, ವಿದ್ಯಾರ್ಥಿ ಮತ್ತು ಪೋಷಕರ ಸ್ವಯಂ ಘೋಷಣಾ ಪತ್ರ ದಾಖಲೆಗಳನ್ನು ಲಗತ್ತಿಸಬೇಕು. ಭರ್ತಿ ಮಾಡಿದ ಅರ್ಜಿ ಮತ್ತು ದಾಖಲೆಗಳನ್ನು ಮೇ 31 ರೊಳಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ (ನಿ), ಅಚ್ಯುತರಾವ್ ಲೇಔಟ್, 4ನೇ ತಿರುವು, ನಂಜಪ್ಪ ಆಸ್ಪತ್ರೆ ಮುಂಭಾಗ, ಶಿವಮೊಗ್ಗ ಈ ವಿಳಾಸಕ್ಕೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08182-228262 ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಡಕೆ ಧಾರಣೆ

ಶಿವಮೊಗ್ಗ

- ಸರಕು.............. 55199 - 85559
- ಬೆಟ್ಟೆ................ 56572 - 61899
- ರಾಶಿಇಡಿ............ 45069 - 55611
- ಗೊರಬಲು.......... 19010 - 41799



ಬಿಎಸ್ ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಅವರನ್ನು ಸಂಸದ ಬಿ.ವೈ.ರಾಘವೇಂದ್ರ ಆಹ್ವಾನಿಸಿದರು.



ಬಿಎಸ್ ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ಕರ್ನಾಟಕದ ಮಾಜಿ ಸಭಾಪತಿ ಡಿ.ಎಚ್. ಶಂಕರಮೂರ್ತಿ ಅವರನ್ನು ಸಂಸದ ಬಿ.ವೈ.ರಾಘವೇಂದ್ರ ಆಹ್ವಾನಿಸಿದರು.

ಪವರ್‌ಲಿಫ್ಟಿಂಗ್ ಸ್ಪರ್ಧೆ: ಕಾರ್ತಿಕ್‌ಗೆ ಕಂಚಿನ ಪದಕ



ಭದ್ರಾವತಿ: ಮಂಗಳೂರಿನ ಕಿನ್ನಗೋಳದಲ್ಲಿ ಜರುಗಿದ ಕರ್ನಾಟಕ ರಾಜ್ಯ ಪವರ್‌ಲಿಫ್ಟಿಂಗ್ ಪಂದ್ಯಾವಳಿಯಲ್ಲಿ ಕ್ರೀಡಾಪಟು ಕಾರ್ತಿಕ್ ಭಾಗವಹಿಸಿ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ. 83 ಕೆ.ಜಿ ವಿಭಾಗದಲ್ಲಿ ಸ್ಪರ್ಧಿಸಿ ಸ್ಕ್ವಾಟ್ ನಲ್ಲಿ 255 ಕೆ.ಜಿ, ಬೆಂಚ್ ಪ್ರೆಸ್‌ನಲ್ಲಿ 150 ಕೆ.ಜಿ ಮತ್ತು ಡೆಡ್ ಲಿಫ್ಟ್‌ನಲ್ಲಿ 245 ಕೆ.ಜಿ ಸೇರಿ ಒಟ್ಟು 650 ಕೆ.ಜಿ ಭಾರ ಎತ್ತುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ. ಕಂಚಿನ ಪದಕ ಗೆಲ್ಲುವ ಮೂಲಕ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಇವರು ತರಬೇತುದಾರರಾದ ರಾಕೇಶ್ ಉಪಾಧ್ಯಾಯ ಅವರ ಮಾರ್ಗದರ್ಶನದಲ್ಲಿ ತರಬೇತಿ ಪಡೆದಿದ್ದು, ಕುವೆಂಪು ವಿಶ್ವವಿದ್ಯಾಲಯದ ಲೀಲಾವತಿ ರಮೇಶ್ ರವರ ಪುತ್ರರಾಗಿದ್ದಾರೆ. ಕಾರ್ತಿಕ್‌ಗೆ ನಗರದ ಗಣ್ಯರು, ಕ್ರೀಡಾಪಟುಗಳು ಕ್ರೀಡಾ ಅಭಿಮಾನಿಗಳು ಅಭಿನಂದಿಸಿದ್ದಾರೆ.

ಮಗನ ರಾಜ್ಯಾಧ್ಯಕ್ಷ ಪಟ್ಟ ಉಳಿಸಲು ಅಭಿಮಾನೋತ್ಸವ

ಉಪಚುನಾವಣೆಯಲ್ಲಿ ಸೋತ ನಂತರ ಮಗನಿಗೆ ರಾಜಕೀಯ ಬಳುವಳಿ ನೀಡಲು ಉತ್ಸವ: ಸಚಿವ ಮಧು ವ್ಯಂಗ್ಯ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ಇತ್ತೀಚಿನ ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಬಿಜೆಪಿ ಹೀನಾಯ ಸೋಲು ಅನುಭವಿಸಿದ ಹಿನ್ನೆಲೆಯಲ್ಲಿ ಮಗನಿಗೆ ರಾಜಕೀಯ ಬಳುವಳಿ ನೀಡಲು ಮೇ 9 ರಂದು ಚಿತ್ರದುರ್ಗದಲ್ಲಿ ಬಿಎಸ್‌ವೈ ಅಭಿಮಾನೋತ್ಸವ ಆಯೋಜಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ವ್ಯಂಗ್ಯವಾಡಿದರು.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಡಿಯೂರಪ್ಪ ಎಷ್ಟು ಹೋರಾಟ ಮಾಡಿದ್ದಾರೆ ಎಂದು ನನ್ನ ಬಳಿ ಲೆಕ್ಕ ಇಲ್ಲ. ಜಿಲ್ಲೆಯಲ್ಲಿ ಜೆ.ಎಚ್.ಪಟೇಲರು ಹೋರಾಟ ಮಾಡಿದ್ದರು. ಬಂಗಾರಪ್ಪ ಅವರ ಹೋರಾಟವನ್ನು ಜನರು ಇಂದಿಗೂ ಸ್ಮರಿಸಿಕೊಳ್ಳುತ್ತಾರೆ. ಯಡಿಯೂರಪ್ಪನವರು ರೈತ ಪರ ಹೋರಾಟ ಮಾಡಿದ್ದಾರೆ ನಿಜ. ಇದನ್ನು ಪಿಕ್ಚರ್‌ಮಾಡಿ ತೋರಿಸಲಿ, ಇದನ್ನು ನಾನು ಇಲ್ಲ ಎನ್ನುತ್ತಿಲ್ಲ. ಬೇರೆಯವರಿಗೆ ಹೋಲಿಸಿದರೆ ಯಡಿಯೂರಪ್ಪರ ಹೋರಾಟ ಲೆಕ್ಕಕ್ಕೆ ಇರಲ್ಲ. ಹಾವೇರಿಯಲ್ಲಿ ಗೊಬ್ಬರ ಕೇಳಿದವರಿಗೆ ಗುಂಡಿಟ್ಟು ಹೊಡೆದರು. ಅದಕ್ಕೂ, ಇವರು ಸನ್ಮಾನ ಮಾಡಬೇಕಲ್ಲ ಎಂದು ಕುಟುಕಿದರು.



ಯಡಿಯೂರಪ್ಪನವರ ಹಿರಿತನದ ಬಗ್ಗೆ ನನಗೆ ಗೌರವವಿದೆ. ನಾನೂ ಅನೇಕ ಹೋರಾಟಗಳನ್ನು ಮಾಡಿಯೇ ರಾಜಕೀಯದಲ್ಲಿ ಬೆಳೆದು ಬಂದಿದ್ದೇನೆ. ನಮ್ಮ ತಂದೆ ಬಂಗಾರಪ್ಪನವರೂ ಮುಖ್ಯಮಂತ್ರಿಗಳಾಗಿ ಇನ್ನೂ ಜನಮಾನಸದಲ್ಲಿ ಅಚ್ಚಳಿಯದೆ ಉಳಿಯುವ ಯೋಜನೆಗಳನ್ನು ಜಾರಿಗೊಳಿಸಿದ್ದರು. ಅಂತಹ ಒಂದಾದರೂ ಯೋಜನೆಗಳನ್ನು ಯಡಿಯೂರಪ್ಪ ಜಾರಿಗೆ ತಂದಿದ್ದಾರಾ ಎಂದು ಪ್ರಶ್ನಿಸಿದ ಅವರು, ನಕಲಿ ಛೋಟಾ ಸಹಿಯಿಂದಾಗಿ ಮುಖ್ಯಮಂತ್ರಿಯಾಗಿದ್ದ ಯಡಿಯೂರಪ್ಪ ಜೈಲಿಗೆ ಹೋಗಬೇಕಾಯಿತು. ಅದು ದುರ್ದೈವದ ಸಂಗತಿ. ಅವರಿಂದ ಜನ ಯಾವ ಪಾಠ ಕಲಿಯಲು ಸಾಧ್ಯ? ಎಲ್ಲಿ ಮಗನ ರಾಜ್ಯಾಧ್ಯಕ್ಷ ಪಟ್ಟಕೈ ತಪ್ಪಿ ಹೋಗುತ್ತೋ ಎಂಬ ಭಯದಿಂದ ಅಭಿಮಾನೋತ್ಸವ ಎಂಬ ಕಾರ್ಯಕ್ರಮವನ್ನು ಆಯೋಜಿಸಿ ಮಗನ ರಕ್ಷಣೆಗೆ ಮುಂದಾಗಿದ್ದಾರೆ. ಜನತೆ ಅದನ್ನು ತಿಳಿಯದಷ್ಟು ಮೂರ್ಖರಲ್ಲ ಎಂದು ತಿರುಗೇಟು ನೀಡಿದರು.

ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಫ್ಲಾಪ್ ಆಗಿದ್ದಾರೆ. ಬಿಜೆಪಿಯಲ್ಲಿ ಐದಾರು ಬಾಗಿಲುಗಳು ಇವೆ. ಅದರಲ್ಲಿ ಒಂದು ಬಾಗಿಲು ಮಾಡಿ ವಿಜಯೇಂದ್ರಗೆ ಬಳುವಳಿ ನೀಡಲು ಯಡಿಯೂರಪ್ಪ ಹೊರಟಿದ್ದಾರೆ. ಯಡಿಯೂರಪ್ಪನವರನ್ನು ಭ್ರಷ್ಟಾಚಾರಿ ಎಂದು ಇದೇ ಅಮಿತ್ ಷಾ ಹೇಳಿದ್ದಾರೆ. ಇದು ಅಪ್ಪಟ ರಾಜಕೀಯ ಕಾರ್ಯಕ್ರಮ ಎಂದರು.

ಬೇಸೂರು ಅಣು ಸ್ಥಾವರ ಸ್ಥಾಪನೆಗೆ ತಮ್ಮ ತೀವ್ರ ವಿರೋಧವಿದೆ. ಯಾವುದೇ ಕಾರಣಕ್ಕೂ ಈ ಮಾರಕ ಯೋಜನೆಯನ್ನು ಒಪ್ಪುವುದಿಲ್ಲ ಎಂದ ಅವರು, ಕೇಂದ್ರ ಸರ್ಕಾರದವರು ನಮ್ಮ ಸರ್ಕಾರವನ್ನು ಕೇಳದೆ ಪರಿಸರ ಮಾರಕ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಅದು ದುರ್ದೈವದ ಸಂಗತಿ. ಈಗ ಬೇಸೂರು ಅಣುಸ್ಥಾವರದ ಪ್ರಸ್ತಾವನೆ ಮುನ್ನೆಲೆಗೆ ಬಂದಿದೆ. ಮೊದಲು ಕೇಂದ್ರ ಸರ್ಕಾರ ಈ ಭಾಗದ ಅರಣ್ಯವಾಸಿಗಳಿಗೆ ಭೂ ಹಕ್ಕು ನೀಡುವ ಕೆಲಸ ಮಾಡಲಿ. ಅದನ್ನು ಬಿಟ್ಟು ತನಗೆ ಬೇಕಾದ ಯೋಜನೆ ಜಾರಿಗೆ ತರುವುದನ್ನು ನಿಲ್ಲಿಸಲಿ ಎಂದು ತಾಕೀತು ಮಾಡಿದರು.

ಶಿವಮೊಗ್ಗ ವಿಮಾನ ನಿಲ್ದಾಣದ ಬಗ್ಗೆ ಮಾತನಾಡಿದ ಅವರು, ಅದನ್ನು ನಿರ್ಮಿಸಿದ್ದು ರಾಜ್ಯ ಸರ್ಕಾರದ ದುಡ್ಡಿನಿಂದ. ರಾಜ್ಯ ಸರ್ಕಾರದಿಂದ ಅದರ ನಿರ್ವಹಣೆ ಸಾಧ್ಯವಾಗದಿದ್ದರೆ ಕೇಂದ್ರ ಸರ್ಕಾರಕ್ಕೆ ವಹಿಸಿಕೊಡಿ ಎಂದು ಸಂಸದ ರಾಘವೇಂದ್ರ ಹೇಳಿದ್ದಾರೆ. ನಿಲ್ದಾಣ ನಿರ್ಮಾಣವಾಗಿದ್ದು ಅವರಪ್ಪನ ದುಡ್ಡಿನಿಂದಲ್ಲ ಎಂದು ಗುಡುಗಿದ ಸಚಿವರು, ಇನ್ನೆರಡು ತಿಂಗಳಲ್ಲಿ ನೈಟ್ ಲ್ಯಾಂಡಿಂಗ್ ವ್ಯವಸ್ಥೆ ಆಗುತ್ತದೆ. ಆಗ ಎಲ್ಲ ಸರಿಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಆರ್. ಪ್ರಸನ್ನಕುಮಾರ್, ಪ್ರಮುಖರಾದ ಕಲಗೋಡು ರತ್ನಾಕರ ಮೊದಲಾದವರಿದ್ದರು.

ಕೋಣಂದೂರು ಲಿಂಗಪ್ಪಗೆ ಗೌರವ ಡಾಕ್ಟರೇಟ್ ಪ್ರದಾನ

ಅನಾರೋಗ್ಯದ ಕಾರಣ ಮನೆಗೇ ತೆರಳಿ ಪದವಿ ಪ್ರದಾನ ಮಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ಅನಾರೋಗ್ಯ ಕಾರಣ ಕಳೆದ ಬುಧವಾರ ಕುವೆಂಪು ವಿವಿ ಆವರಣದಲ್ಲಿ ಹಮ್ಮಿಕೊಂಡಿದ್ದ 35ನೇ ಘಟಿಕೋತ್ಸವಕ್ಕೆ ಗೈರಾಗಿದ್ದ ಡಾಕ್ಟರೇಟ್ ಪುರಸ್ಕೃತರಾದ ಕೋಣಂದೂರು ಲಿಂಗಪ್ಪ ಅವರ ಮನೆಗೆ ಶುಕ್ರವಾರ ಜಿಲ್ಲಾ ಉಸ್ತುವಾರಿ ಸಚಿವಮಧುಬಂಗಾರಪ್ಪನೇತೃತ್ವದಲ್ಲಿವಿಶ್ವವಿದ್ಯಾಲಯದ ಕುಲಪತಿಗಳು, ಕುಲಸಚಿವರು, ಸಿಂಡಿಕೇಟ್ ಸದಸ್ಯರು, ಇತರೆ ಅಧಿಕಾರಿಗಳು ಶುಕ್ರವಾರ ಭೇಟಿ ನೀಡಿ ಕುವೆಂಪು ವಿಶ್ವವಿದ್ಯಾಲಯದ 35ನೇ ಘಟಿಕೋತ್ಸವದಲ್ಲಿ ಘೋಷಿಸಲಾದ ಡಾಕ್ಟರೇಟ್ ಪದವಿಯನ್ನು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಸಚಿವ ಮಧುಬಂಗಾರಪ್ಪ ಮಾತನಾಡಿ, ತಮ್ಮಂತಹ ಹಿರಿಯರಿಗೆ ಡಾಕ್ಟರೇಟ್ ಲಭಿಸಿರುವುದು ಅತ್ಯಂತ ಸಂತಸದ ವಿಷಯ. ನಿಮ್ಮನ್ನು ಭೇಟಿ ಮಾಡಿ ಮಾತನಾಡುತ್ತಿರುವುದು ನಮ್ಮ ಪುಣ್ಯ ಎಂದರು. ಇದೇವೇಳೆತಮ್ಮ ತಂದೆಮಾಜಿಮುಖ್ಯಮಂತ್ರಿ ಬಂಗಾರಪ್ಪನವರ ರಾಜಕೀಯ ಜೀವನದ ಘಟನೆಯೊಂದನ್ನು ಸ್ಮರಿಸಿಕೊಂಡು, ಹಂಚಿಕೊಂಡರು.

ನನ್ನ ತಂದೆ ಬಂಗಾರಪ್ಪನವರು ಮುಖ್ಯಮಂತ್ರಿಯಾಗಿದ್ದಾಗ ಮೈಸೂರಿನಲ್ಲಿ ಕಾರ್ಯಕ್ರಮವೊಂದನ್ನು ಆಯೋಜಿಸಲಾಗಿತ್ತು. ಆ ಸಂದರ್ಭದಲ್ಲಿ ಕುವೆಂಪುರವರನ್ನು ಭೇಟಿಯಾಗಿದ್ದರು. ಆ ವೇಳೆ ಕುವೆಂಪುರವರು ಕುಪ್ಪಳಿಯ ತಮ್ಮ ಮನೆಯನ್ನು ನೋಡಬೇಕೆಂಬ ಇಂಗಿತ ವ್ಯಕ್ತಪಡಿಸಿದಾಗ ಬಂಗಾರಪ್ಪನವರು ಖುದ್ದಾಗಿ ಹೆಲಿಕಾಪ್ಟರ್‌ವ್ಯವಸ್ಥೆ ಮಾಡಿ, ಅಂದಿನ ಸಚಿವರಾಗಿದ್ದ ಮಲ್ಲಿಕಾರ್ಜುನಯ್ಯ ಹಾಗೂ ಹಾಗೂ ವೈದ್ಯರ ತಂಡದೊಂದಿಗೆ ಕುವೆಂಪುರವರ ಮನೆ ತೋರಿಸಿ, ಅವರನ್ನು ಗೌರವದಿಂದ ಕರೆತಂದಿದ್ದರು ಎಂದು ಮಧು ಬಂಗಾರಪ್ಪ ನೆನಪಿಸಿಕೊಂಡರು. ಅಂದಿನ ದಿನಗಳಲ್ಲಿ ಇದ್ದಂತಹ ಬದ್ಧತೆ ಮತ್ತು ಹಿರಿಯರ ಬಗ್ಗೆ ಇದ್ದ ಗೌರವ ಇಂದು ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟರು.



ತೀರ್ಥಹಳ್ಳಿ ತಾಲೂಕಿನ ಕೋಣಂದೂರಿನವರಾದ ಹಿರಿಯ ಸಮಾಜವಾದಿ ನಾಯಕ ಕೋಣಂದೂರು ಲಿಂಗಪ್ಪ ಅವರ ಮನೆಗೆ ಶುಕ್ರವಾರ ತೆರಳಿ ಸಚಿವ ಮಧು ಬಂಗಾರಪ್ಪ ನೇತೃತ್ವದಲ್ಲಿ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.

ಇದೇ ವೇಳೆ ಕೋಣಂದೂರು ಲಿಂಗಪ್ಪನವರು ಶಿಕ್ಷಣ ವ್ಯವಸ್ಥೆ, ಫಲಿತಾಂಶದ ಬಗ್ಗೆ ವಿಚಾರಿಸಿದರು. ಸಚಿವರು ಪ್ರತಿಕ್ರಿಯಿಸಿ, ರಾಜ್ಯದಲ್ಲಿ ಎಸ್ಸೆಸ್ಸೆಲ್ಸಿಯಲ್ಲಿ ಶೇ. 94.10 ಫಲಿತಾಂಶ ಪಡೆಯುವ ಮೂಲಕ ಈ ಬಾರಿ ಐತಿಹಾಸಿಕ ಸಾಧನೆ ದಾಖಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿ, ಹಿಂದೆ ಈ ಪ್ರಮಾಣವು ಶೇ. 70-80 ರಷ್ಟಿರುತ್ತಿತ್ತು. ಪೂರಕ ಪರೀಕ್ಷೆಯ ಬದಲಾಗಿ ವರ್ಷಕ್ಕೆ ಮೂರು ಪರೀಕ್ಷೆಗಳನ್ನು ನಡೆಸುವ ಸರ್ಕಾರದ ಹೊಸ ನೀತಿಯು ವಿದ್ಯಾರ್ಥಿಗಳಿಗೆ ವರದಾನವಾಗಿದೆ. ಪರೀಕ್ಷೆ ಮುಗಿದ 20 ದಿನಗಳಲ್ಲೇ ಮತ್ತೊಂದು ಅವಕಾಶ ನೀಡುವುದರಿಂದ ವಿದ್ಯಾರ್ಥಿಗಳ ಆತ್ಮವಿಶ್ವಾಸ ಹೆಚ್ಚಿದೆ ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆ ತರುವ ಮೂಲಕ ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುವುದೇ ನಮ್ಮ ಸರ್ಕಾರದ ಗುರಿ ಎಂದು ಸಚಿವರು ಈ ಸಂದರ್ಭದಲ್ಲಿ ಪುನರುಚ್ಚರಿಸಿದರು.

ಈ ವೇಳೆ ಕುವೆಂಪು ವಿಶ್ವವಿದ್ಯಾಲಯದ ಕುಲಪತಿ ಶರತ್ ಅನಂತಮೂರ್ತಿ, ಕುಲಸಚಿವ ಎನ್.ಹೇಮಂತ್, ವಿವಿ ಸಿಂಡಿಕೇಟ್ ಸದಸ್ಯರು ಇದ್ದರು.

ಜೆಸಿಐ ಸಂಸ್ಥೆಯಿಂದ ಸಮಾಜಮುಖಿ ಕಾರ್ಯ: ಪೂರ್ಣಿಮಾ ಸುನೀಲ್



ಶಿವಮೊಗ್ಗ: ಜೆಸಿಐ ಶಿವಮೊಗ್ಗ ಭಾವನಾ ಸಂಸ್ಥೆಯು ನಿರಂತರ ಸೇವಾ ಚಟುವಟಿಕೆಗಳನ್ನು ನಡೆಸುತ್ತಿದ್ದು, ಸಂಸ್ಥೆಯ ಸಮಾಜಮುಖಿ ಕಾರ್ಯ ಅರ್ಥಪೂರ್ಣ ಎಂದು ಜೆಸಿಐ ಸಂಸ್ಥೆಯ ಜಡ್‌ವಿಸಿ ಪೂರ್ಣಿಮಾ ಸುನೀಲ್ ಹೇಳಿದರು. ಜೆಸಿಐ ಶಿವಮೊಗ್ಗ ಭಾವನಾದ ಅಲೂಮಿನಿ ಕ್ಲಬ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ, ಜನಸಂಖ್ಯೆ ಹೆಚ್ಚಾದಂತೆ ಪ್ರಕೃತಿಯ ಮೇಲಿನ ಕಾಳಜಿಯು ಕಡಿಮೆಯಾಗುತ್ತಿದೆ. ಮಲೆನಾಡು ಶಿವಮೊಗ್ಗ ಅತಿ ಹೆಚ್ಚು ಬಿಸಿಲು ಹೊಂದಿದ ಜಿಲ್ಲೆಗಳಲ್ಲಿ ಒಂದಾಗುತ್ತಿದೆ. ಇಂತಹ ಬಿಸಿಲ ಬೇಗೆಯಿಂದ ಸುಡುತ್ತಿರುವ ಮೂಕ ಪಕ್ಷಿಗಳನ್ನು ಕೇಳುವವರಿಲ್ಲ. ಇದಕ್ಕಾಗಿ ಜೆಸಿಐ ಸಂಸ್ಥೆ ಹಕ್ಕಿಗಳಿಗೆ ತಮ್ಮದೇ ಮನೆಯ ತಾರಸಿ ಮೇಲೆ ಆಗಿರಬಹುದು ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಆಗಿರಬಹುದು. ಹಕ್ಕಿಗಳು ಅತಿ ಹೆಚ್ಚು ಇರುವ ಸ್ಥಳಗಳಲ್ಲಿ ನೀರು ಸಿಗುವಂತೆಮಾಡುವವಿಶೇಷಕಾರ್ಯಕ್ರಮ ರೂಪಿಸಿದೆ ಎಂದು ತಿಳಿಸಿದರು. ಜೆಸಿಐ ಸಂಸ್ಥೆಯು ತನ್ನದೇ ಆದ ರೀತಿಯಲ್ಲಿ ಸಮಾಜ ಸೇವೆ ಮಾಡುತ್ತಾ ಬಂದಿದ್ದು, ಇತ್ತೀಚೆಗೆ ಹಕ್ಕಿಗಳಿಗೆ ನೀರುಣಿಸಲು ಅನುಕೂಲವಾಗುವ ವ್ಯವಸ್ಥೆ ಮಾಡಲಾಯಿತು ಎಂದರು. ಜೆಸಿಐ ಸಂಸ್ಥೆಯ ಜಡ್‌ವಿಸಿ ಉದಯ್ ಕಡಂಬ, ಕೋಆರ್ಡಿನೇಟರ್ ದಿವ್ಯಾ, ಸುರೇಖಾ ಮುರುಳಿಧರ್, ಜೆಸಿಐ ಶಿವಮೊಗ್ಗ ಭಾವನಾದ ಅಧ್ಯಕ್ಷೆ ಕರಿಬಸಮ್ಮ, ಜೆಸಿಐ ಶಿವಮೊಗ್ಗ ವಿವೇಕ್ ಅಧ್ಯಕ್ಷೆ ವಿಜಯಲಕ್ಷ್ಮೀ ಉದಯ್ ಹಾಗೂ ಎಲ್ಲ ಸದಸ್ಯರು ಪಾಲ್ಗೊಂಡಿದ್ದರು.

ಹತ್ಯೆಗೆ ಯತ್ನ ಪ್ರಕರಣ: ಆರೋಪಿಗಳಿಗೆ ಜೈಲು ಶಿಕ್ಷೆ

• **ಕನ್ನಡಪ್ರಭ ವಾರ್ತೆ** ಭದ್ರಾವತಿ

ತಾಲೂಕಿನ ಕೊಮಾರನಹಳ್ಳಿ ತಾಂಡಾದಲ್ಲಿ ಆಸ್ತಿ ವಿಚಾರಕ್ಕೆ ಸಂಬಂಧಿಸಿದಂತೆ ಕಳೆದ 5 ವರ್ಷಗಳ ಹಿಂದೆ ನಡೆದಿದ್ದ ಇಬ್ಬರಿಗೆ ಚಾಕುವಿನಿಂದ ಇರಿದು ಹತ್ಯೆಗೆ ಯತ್ನಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಿಗೆ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಿ 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಆರೋಪಿಗಳಾಗಿರುವ ಕೊಮಾರನಹಳ್ಳಿ ತಾಂಡ ನಿವಾಸಿಗಳಾದ ರವಿನಾಯ್ಕ(32), ದಿವಂಗತ ರಾಜನಾಯ್ಕ(58) ಮತ್ತು ಲಕ್ಷ್ಮೀಬಾಯಿ(40) ರವರು ಆಸ್ತಿಯ ಭಾಗದ ವಿಚಾರವಾಗಿ 3 ಜೂನ್ 2021ರಂದು ರಾತ್ರಿ ಶರತ್(24), ಸುರೇಂದ್ರ(45), ವಿನಯ್ ಕುಮಾರ್ (21), ಜಯಬಾಯಿ(55) ಮತ್ತು ಸರೋಜಾ ಬಾಯಿ(41) ರವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಚಾಕುವಿನಿಂದ ಶರತ್‌ರವರ ಹೊಟ್ಟೆಗೆ 2-3 ಬಾರಿ ಇರಿದು ತೀವ್ರ ಸ್ವರೂಪದ ಗಾಯಪಡಿಸಿ ಕೊಲೆ ಮಾಡಲು ಯತ್ನಿಸಲಾಗಿತ್ತು. ಈ ಘಟನೆಗೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ಆಗಿನ ತನಿಖಾಧಿಕಾರಿ ಎಎಸ್‌ಐ(ನಿವೃತ್ತ) ಕೆ.ಕೆ ತ್ಯಾಗರಾಜ್ ರವರು ಪ್ರಕರಣದ ತನಿಖೆ ಪೂರೈಸಿ, ಆರೋಪಿತರ ವಿರುದ್ಧ ದೋಷಾರೋಪಣ ಪತ್ರವನ್ನು ಸಲ್ಲಿಸಿದ್ದರು.

ನ್ಯಾಯಾಲಯದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ರತ್ನಮ್ಮ ಪಿ. ವಾದ ಮಂಡಿಸಿದ್ದು, 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ನಡೆದು ಆರೋಪಿತರ ವಿರುದ್ಧ ಆರೋಪ ದೃಢಪಟ್ಟ ಹಿನ್ನೆಲೆಯಲ್ಲಿ ನ್ಯಾಯಾಧೀಶರಾದ ಇಂದಿರಾ ಮೈಲಸ್ವಾಮಿ ಚೆಟ್ಟಿಯಾರ್‌ರವರು ಆರೋಪಿ ರವಿನಾಯ್ಕನಿಗೆ 8 ವರ್ಷ ಕಠಿಣ ಕಾರಾಗೃಹ ವಾಸ ಮತ್ತು 2,00,000 ರು. ದಂಡವನ್ನು ವಿಧಿಸಿದ್ದು, ಉಳಿದ ಇಬ್ಬರು ಆರೋಪಿತರಿಗೆ 2 ವರ್ಷ ಕಠಿಣ ಕಾರಾಗೃಹ ವಾಸ ಮತ್ತು ತಲಾ 20,000 ರು. ದಂಡವನ್ನು ವಿಧಿಸಿರುತ್ತದೆ.

ಇದೇಪ್ರಕರಣದಲ್ಲಿರವಿನಾಯ್ಕಮೇಲೆಚಾಕುವಿನಿಂದ ಸರೋಜಾ ಬಾಯಿ, ವಿನಯ್ ಕುಮಾರ್‌ಮತ್ತು ಶರತ್ ಎಂಬುವರು ಎರಡು ಬಾರಿ ಚಾಕುವಿನಿಂದ ಹಲ್ಲೆ ನಡೆಸಿದ್ದರು. ಅವರವಿರುದ್ಧವೂಪ್ರಕರಣದಾಖಲಾಗಿತ್ತು. 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಶರತ್‌ಗೆ 8 ವರ್ಷ ಶಿಕ್ಷೆ, 2,31,000 ರೂ ದಂಡ ವಿಧಿಸಿದರೆ, ವಿನಯ್ ಮತ್ತು ಸರೋಜಾ ಬಾಯಿಗೆ 3 ವರ್ಷ ಶಿಕ್ಷೆ 62 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಚಾರಣಿಗರ ಸ್ವರ್ಗವೇ ಹಿಮಾಲಯ ಪ್ರದೇಶ: ಎಸ್. ವಾಗೇಶ್ ಅಭಿಮತ

ಶಿವಮೊಗ್ಗ ರೈಲ್ವೆ ನಿಲ್ದಾಣದಿಂದ 56 ಜನರ ಪ್ರವಾಸ



ಶಿವಮೊಗ್ಗ, ತರುಣೋದಯ, ಹೊಸನಗರ, ಚಿಕ್ಕಮಗಳೂರು, ಮೈಸೂರು, ಬೆಂಗಳೂರು ಘಟಕಗಳ 56 ಚಾರಣಿಗ ಸದಸ್ಯರು ಶಿವಮೊಗ್ಗ ರೈಲ್ವೆ ನಿಲ್ದಾಣದಿಂದ ಪ್ರವಾಸ ಕೈಗೊಂಡರು.

ಶಿವಮೊಗ್ಗ: ಚಾರಣಿಗರ ಸ್ವರ್ಗ ಹಿಮಾಲಯ ಪ್ರದೇಶ. ಪ್ರತಿ ದಿನ ಪ್ರಾಕೃತಿಕ ವಿಸ್ಮಯ ಗೋಚರಿಸಿ ವಿಶೇಷ ಅನುಭವ ನೀಡುವ ಸರ್‌ಪಾಸ್ ಅನ್ನು ಚಾರಣಗಳ ರಾಜ ಎನ್ನಲಾಗುತ್ತದೆ ಎಂದು ಯೂತ್ ಹಾಸ್ಟೆಲ್ ಅಸೋಸಿಯೇಷನ್ ಆಫ್ ಇಂಡಿಯಾ ತರುಣೋದಯ ಘಟಕದ ಚೇರ್ಮನ್ ಎಸ್.ಎಸ್.ವಾಗೇಶ್ ಹೇಳಿದರು.

ಶಿವಮೊಗ್ಗ, ತರುಣೋದಯ, ಹೊಸನಗರ, ಚಿಕ್ಕಮಗಳೂರು, ಮೈಸೂರು, ಬೆಂಗಳೂರು ಘಟಕಗಳ 56 ಚಾರಣಿಗ ಸದಸ್ಯರು ಶಿವಮೊಗ್ಗ ರೈಲ್ವೆ ನಿಲ್ದಾಣದಿಂದ ಪ್ರವಾಸ ಕೈಗೊಂಡ ಸಂದರ್ಭದಲ್ಲಿ ಮಾತನಾಡಿ, ಸರ್‌ಪಾಸ್ ಹಿಮಾಲಯ ಚಾರಣವು ಪ್ರತಿಯೊಬ್ಬರಿಗೂ ಸಂತಸ ಹೆಚ್ಚಿಸುತ್ತದೆ ಎಂದು ತಿಳಿಸಿದರು.

ಯೂತ್ ಹಾಸ್ಟೆಲ್ ಅಸೋಸಿಯೇಷನ್ ಆಫ್ ಇಂಡಿಯಾ ರಾಜ್ಯ ಘಟಕದ ಮಾಜಿ ಉಪಾಧ್ಯಕ್ಷ ಜಿ.ವಿಜಯಕುಮಾರ್‌ಮಾತನಾಡಿ, ಹಿಮಾಲಯ ದೇವ ಭೂಮಿ. ಯೂತ್ ಹಾಸ್ಟೆಲ್ ಸಹಕಾರ ನೀಡಿ ಉತ್ತಮ ಅನುಕೂಲ ಒದಗಿಸಿ, ಚಾರಣಿಗರಿಗೆ ನೆರವು ನೀಡುತ್ತಾ ಬಂದಿದೆ. ಪ್ರತಿ ವರ್ಷ ಸಾವಿರಾರು ಚಾರಣಿಗರು ಇದರ ಪ್ರಯೋಜನ ಪಡೆಯುತ್ತಿದ್ದಾರೆ, ಪ್ರತಿಯೊಬ್ಬರೂ ಈ ಸಂಸ್ಥೆಯ ಸದಸ್ಯರಾಗಿ ಇದರ ಸೌಲಭ್ಯಗಳನ್ನು ಉಪಯೋಗಿಸಿಕೊಳ್ಳಬೇಕು ಎಂದರು. ಚಾರಣ ಮಿತ್ರ ಸಂಸ್ಥೆಯ ಪ್ರಮುಖರಾದ ಹರೀಶ್ ಪಂಡಿತ್ ಮಾತನಾಡಿ, ಈಗಾಗಲೇ ನಮ್ಮ ಸಂಸ್ಥೆ ವತಿಯಿಂದ ಸಾಕಷ್ಟು ರಾಜ್ಯ, ರಾಷ್ಟ್ರ ಹಾಗೂ ಸ್ಥಳೀಯ ಮಟ್ಟದ ಚಾರಣಗಳನ್ನು ಹಮ್ಮಿಕೊಳ್ಳುತ್ತಾ ಬಂದಿದ್ದೇವೆ. ಚಾರಣದಿಂದ ದೇಹ ಮನಸ್ಸು ಸದೃಢವಾಗುವುದರ ಜೊತೆಗೆ ನಮಗೆ ಸ್ಥಳದ ಮಹತ್ವ ಹಾಗೂ ಬೇರೆ ಬೇರೆ ಚಾರಣಿಗರ ಸಂಪರ್ಕ ಸಿಗುತ್ತದೆ ಎಂದು ನುಡಿದರು.

ಪ್ರವೀಣ್ ಅಕ್ಕಸಾಲಿ ಎಲ್ಲರನ್ನು ಸ್ವಾಗತಿಸಿದರು. ರಮೇಶ್ ನಾಡಿಗ್ ಪ್ರಾಸ್ತಾವಿಕ ಮಾತನಾಡಿದರು. ಪ್ರಶಾಂತ್ ವಂದಿಸಿದರು. ಗಣೇಶ್ ಮತ್ತಿತರರು ಹಾಜರಿದ್ದರು.

ಕಡಿವಾಣಕ್ಕೆ ಆಗ್ರಹ | ತಾಲೂಕಿನಲ್ಲಿ ಅಧಿಕಾರಿಗಳ ನೆರವಿನಿಂದಲೇ ಅಕ್ರಮವಾಗಿ ಮರಳು ಸಾಗಣೆ ನಡೆಯುತ್ತಿದೆ: ಶಾಸಕ ಆರಗ ಜ್ಞಾನೇಂದ್ರ ಆರೋಪ

ಅಕ್ರಮ ಮರಳು ಸಾಗಾಣಿಕೆಯಲ್ಲಿ ತಹಸೀಲ್ದಾರ್ ಶಾಮೀಲು

• **ಕನ್ನಡಪ್ರಭ ವಾರ್ತೆ** ತೀರ್ಥಹಳ್ಳಿ

ತಾಲೂಕಿನಲ್ಲಿ ಅಧಿಕಾರಿಗಳ ನೆರವಿನಿಂದಲೇ ಅಕ್ರಮವಾಗಿ ಮರಳು ಸಾಗಣೆ, ಬಂಡೆ ಗಣಿಗಾರಿಕೆ ಎಗ್ಗಿಲ್ಲದೇ ನಡೆಯುತ್ತಿದ್ದು, ಅಕ್ರಮದಲ್ಲಿ ತಹಸೀಲ್ದಾರ್ ಅವರು ಶಾಮೀಲಾಗಿದ್ದಾರೆ ಎಂದು ಶಾಸಕ ಆರಗ ಜ್ಞಾನೇಂದ್ರ ಗಂಭೀರ ಆರೋಪ ಮಾಡಿದರು.

ದಬ್ಬಣಗದ್ದೆ ಮರಳು ಕ್ವಾರಿಯಿಂದ ಮೇ ಆರನೇ ತಾರೀಕಿನಂದು ನಸುಕಿನಿಂದ ಅಧಿಕಾರಿಗಳ ನೆರವಿನಿಂದ ಸುಮಾರು 200 ಲಾರಿ ಲೋಡು ಮರಳನ್ನು ಅಕ್ರಮವಾಗಿ ಸಾಗಿಸಲಾಗಿದೆ. ಇದರಲ್ಲಿ ತಹಸೀಲ್ದಾರ್, ಭೂ ಮತ್ತು ಗಣಿ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ಶಾಮೀಲಾಗಿದ್ದು, ಅಕ್ರಮವನ್ನು ತಡೆಯುವಲ್ಲಿ ನನ್ನದು ಒಂಟಿ ಧ್ವನಿಯಾಗಿದೆ ಎಂದು ಬಿ.ಎಸ್.ಯಡಿಯೂರಪ್ಪ ಅಭಿಮಾನೋತ್ಸವಕ್ಕೆಸಂಬಂಧಿಸಿದ ಶುಕ್ರವಾರ ಪಟ್ಟಣದ ಪಕ್ಷದ ಕಚೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಹೇಳಿದರು.



ಬಿಎಸ್‌ವೈ ಅಭಿಮಾನೋತ್ಸವಕ್ಕೆ ಸಂಬಂಧಿಸಿ ಶಾಸಕ ಆರಗ ಜ್ಞಾನೇಂದ್ರ, ತೀರ್ಥಹಳ್ಳಿ ಪಟ್ಟಣದ ಪಕ್ಷದ ಕಚೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಹೆದ್ದೂರು ನವೀನ್, ಬೇಗುವಳ್ಳಿ ಸತೀಶ್, ಚಂದವಳ್ಳಿ ಸೋಮಶೇಖರ್, ಸಂದೇಶ್ ಜವಳಿ ಇದ್ದರು.

ಮರಳು ಸಾಗಣೆದಾರರೊಂದಿಗೆ ಅಧಿಕಾರಿಗಳು ಸೇರಿ ಲೂಟಿ ಹೊಡೆಯುತ್ತಿದ್ದಾರೆ. ಸಾರ್ವಜನಿಕರಿಂದ ಬಂದ ದೂರಿನ ಹಿನ್ನೆಲೆಯಲ್ಲಿ ನಾನು ಮರಳು ಕ್ವಾರಿಗೆ ಭೇಟಿ ನೀಡಿದ ವೇಳೆ ಸುಮಾರು 50ಕ್ಕೂ ಹೆಚ್ಚು ಲಾರಿಗಳು ಪಲಾಯನ ಮಾಡಿದವು. ಮರಳು ಸಾಗಣೆಯಲ್ಲಿ ತೊಡಗಿದ್ದ 5 ಜೆಸಿಬಿಗಳ ಮೇಲೆ ಮಾಳೂರು ಠಾಣೆಯಲ್ಲಿ ದೂರು ದಾಖಲಿಸಲಾಗಿದೆ ಎಂದರು.

ಮುಂಡಳ್ಳಿ ಕ್ವಾರಿಯಲ್ಲೂ ಇದೇ ರೀತಿ ಅಕ್ರಮ ನಡೆದಿದೆ. ಕುರುವಳ್ಳಿ ಬಂಡೆಯಲ್ಲೂ ಅಕ್ರಮವಾಗಿ ಗಣಿಗಾರಿಕೆ ನಡೆದಿದ್ದು, ಇದರಲ್ಲೂ ತಹಸೀಲ್ದಾರ್‌ಮತ್ತು ಸ್ಥಳೀಯ ಪೊಲೀಸರು ಶಾಮೀಲಾಗಿದ್ದಾರೆ. ತಾಲೂಕಿನಲ್ಲಿ ನಡೆದಿರುವ ಅಕ್ರಮ ಮರಳು ಸಾಗಣೆಯನ್ನು ನಿಯಂತ್ರಿಸಬೇಕಿದ್ದ ಇಲ್ಲಿನ ತಹಸೀಲ್ದಾರ್‌ರವರೇ ಇದಕ್ಕೆ ಬೆಂಬಲವಾಗಿದ್ದು, ಅವರ ವಿರುದ್ಧ ದೂರು ದಾಖಲಿಸಬೇಕಿದೆ. ಬಗರ್‌ಹುಕುಂ ಸಮಿತಿ ಸಭೆಗಳಿಗೂ ಸಹಕರಿಸುತ್ತಿಲ್ಲ ಎಂದು ಆರೋಪಿಸಿದರು.

ದಬ್ಬಣಗದ್ದೆ ಮರಳು ಕ್ವಾರಿಯಿಂದ ಕಳೆದ ವರ್ಷ ಸಾಗಿಸಬೇಕಿದ್ದ 28 ಸಾವಿರ ಟನ್ ಬದಲಿಗೆ ಕೇವಲ 57 ಟನ್ ಮಾತ್ರ ಬಿಲ್ ಹಾಕಲಾಗಿದ್ದು, ಬಿಲ್ ಹಾಕದೇ ಮರಳನ್ನು ಕದ್ದು ಸಾಗಿಸಿದ್ದು, ಸರ್ಕಾರಕ್ಕೆ ಕೋಟ್ಯಾಂತರ ರು. ರಾಯಲ್ಟಿ ಹಣವನ್ನು ವಂಚಿಸಲಾಗಿದೆ. ಈ ಬಗ್ಗೆ ಗುತ್ತಿಗೆದಾರರಿಗೆ ಹಾಕಲಾಗಿದ್ದ 1.08 ಕೋಟಿ ರು. ದಂಡದ ಹಣವನ್ನು ಈವರೆಗೂ ಪಾವತಿಸಲಾಗಿಲ್ಲ ಎಂದು ದೂರಿದರು.

ತಾಲೂಕಿನ ಸಮಗ್ರ ಅಭಿವೃದ್ಧಿಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಕೊಡುಗೆ ಅಪಾರವಾಗಿದ್ದು, ಅವರ ಜೀವನ ಮುಂದಿನ ತಲೆಮಾರಿಗೆ ಪಠ್ಯದಂತಿದೆ. ಜನಪರ ಹೋರಾಟ ಸೈದ್ಧಾಂತಿಕ ನೆಲೆಯಲ್ಲಿ ಬಂದಿರುವ ಬಿಎಸ್‌ವೈ ಅಧಿಕಾರವಧಿಯಲ್ಲಿ ಈ ಕ್ಷೇತ್ರಕ್ಕೆ ನೂರಾರು ಕೋಟಿ ಅನುದಾನ ಹರಿದು ಬಂದಿದೆ. ಚಿತ್ರದುರ್ಗದಲ್ಲಿ ಶನಿವಾರ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವಕ್ಕೆ ತಾಲೂಕಿನಿಂದ 5 ಸಾವಿರ ಮಂದಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮಂಡಲ ಬಿಜೆಪಿ ಅಧ್ಯಕ್ಷ ಹೆದ್ದೂರು ನವೀನ್, ಬೇಗುವಳ್ಳಿ ಸತೀಶ್, ಚಂದವಳ್ಳಿ ಸೋಮಶೇಖರ್, ಸಂದೇಶ್ ಜವಳಿ, ಸಂತೋಷ್ ದೇವಾಡಿಗ, ಸೊಪ್ಪುಗುಡ್ಡೆ ರಾಘವೇಂದ್ರ ಇದ್ದರು.

ಸುದ್ದಿ ಸಿಂಚನ

ಬೈಕ್ ಡಿಕ್ಕಿ: ಚಿರತೆ ಸ್ಥಳದಲ್ಲೇ ಸಾವು

ಶಿವಮೊಗ್ಗ: ತೀರ್ಥಹಳ್ಳಿ ತಾಲೂಕಿನ ಮಂಡಗದ್ದೆ ಬಳಿ ಚಿರತೆಯೊಂದಕ್ಕೆ ಬೈಕ್ ಡಿಕ್ಕಿ ಹೊಡೆದು ಚಿರತೆ ಸಾವನ್ನಪ್ಪಿರುವ ಘಟನೆ ಶುಕ್ರವಾರ ಮಧ್ಯಾಹ್ನ ನಡೆದಿದೆ.



ಬೈಕ್ ಸವಾರ ಶಿವಮೊಗ್ಗ ಮಾರ್ಗದಿಂದ ತೀರ್ಥಹಳ್ಳಿಗೆ ತೆರಳುತ್ತಿದ್ದ ವೇಳೆ ಚಿರತೆ ಅಡ್ಡ ಬಂದಿದೆ. ಇದರಿಂದ ನಿಯಂತ್ರಣ ತಪ್ಪಿದ ಬೈಕ್ ಸವಾರ ಚಿರತೆಗೆ ಡಿಕ್ಕಿ ಹೊಡೆದಿದ್ದಾನೆ. ಇದರ ಪರಿಣಾಮ ತೀವ್ರ ಗಾಯಗೊಂಡ ಚಿರತೆ ಸ್ಥಳದಲ್ಲೇ ಸಾವನ್ನಪ್ಪಿದ್ದು. ಬೈಕ್ ಸವಾರನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ವಿಷಯ ತಿಳಿದ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಆಕಸ್ಮಿಕವಾಗಿ ವಿದ್ಯುತ್ ತಗುಲಿ ವ್ಯಕ್ತಿ ಸಾವು

ತ್ಯಾಗರ್ತಿ: ಅಡಕೆ ತೋಟಕ್ಕೆ ನೀರು ಹಾಯಿಸಲು ಹೋಗಿದ್ದ ಮರಾಠಿ ಸುರೇಶ್(49) ಆಕಸ್ಮಿಕ ವಿದ್ಯುತ್ ತಗುಲಿ ಶುಕ್ರವಾರ ಬೆಳಗ್ಗೆ ಸಾವನ್ನಪ್ಪಿದ್ದಾರೆ. ಸಾಗರ ತಾಲೂಕಿನ ತ್ಯಾಗರ್ತಿಯ ತಮ್ಮ ಜಮೀನಿನಲ್ಲಿ ಅಡಕೆ ಬೆಳೆದಿದ್ದು, ಕೊಳವೆ ಬಾವಿ ಮುಖಾಂತರ ಪ್ರತಿದಿನ ನೀರು ಹಾಯಿಸುತ್ತಿದ್ದರು. ಎಂದಿನಂತೆ ಶುಕ್ರವಾರ ಬೆಳಗ್ಗೆ ನೀರು ಹಾಯಿಸಲು ಹೋದಾಗ ಕೊಳವೆ ಬಾವಿಗೆ ಎಳೆದಿರುವ ವಿದ್ಯುತ್ ವೈರ್‌ಡ್ಯಾಮೇಜ್ ಆಗಿರುವುದು ತಿಳಿಯದೇ ಕಾಲು ತಗುಲಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಆನಂದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸಾಗರ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಸಾಗರ ಶಾಸಕರಾದ ಗೋಪಾಲಕೃಷ್ಣ ಬೇಳೂರು ಸ್ಥಳಕ್ಕೆ ಬೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಭಾನುಪ್ರಕಾಶ್ ನಿಧನ

ಶಿವಮೊಗ್ಗ: ದುರ್ಗಿಗುಡಿ ನಾಲ್ಕನೇ ಪ್ಯಾರಲಾಲ್



ರೋಡ್ ನಿವಾಸಿ ಡಿ.ಪಿ.ಭಾನುಪ್ರಕಾಶ್(16) ಶುಕ್ರವಾರ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಮೃತರಿಗೆ ತಂದೆ, ತಾಯಿ ಇದ್ದಾರೆ. ಅಂತ್ಯಕ್ರಿಯೆ ನಗರದ ನ್ಯೂ ಮಂಡ್ಲಿ ವೀರಶೈವ ರುದ್ರ ಭೂಮಿಯಲ್ಲಿ ಶನಿವಾರ ನಡೆಯಲಿದೆ.

ಪ್ರಗತಿಪರ ಕೃಷಿಕ ಹೊರಬೈಲು ಪ್ರಭಾಕರ್ ಗೌಡ್ರು ನಿಧನ

ಸೊರಬ: ತಾಲೂಕಿನ ಹೊರಬೈಲು ಗ್ರಾಮದ ಪ್ರಗತಿಪರ ಕೃಷಿಕ ಪ್ರಭಾಕರ್‌ಗೌಡ್ರು (71) ಗುರುವಾರ ಹೃದಯಾಘಾತದಿಂದ ನಿಧನರಾದರು. ಕೃಷಿ ಕ್ಷೇತ್ರದಲ್ಲಿ



ಸದಾ ಸಕ್ರಿಯರಾಗಿದ್ದ ಇವರು, ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಮಾದರಿ ಕೃಷಿಕರಾಗಿ ಗುರುತಿಸಿಕೊಂಡಿದ್ದರು. ಮೃತರು ಪತ್ನಿ, ತಾಪಂ ಮಾಜಿ ಸದಸ್ಯ ಸುನೀಲ್‌ಗೌಡ ಸೇರಿದಂತೆ ಇಬ್ಬರು ಪುತ್ರರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರವನ್ನು ಅವರ ಕೃಷಿ ಭೂಮಿಯಲ್ಲಿ ಶುಕ್ರವಾರ ಸಕಲ ವಿಧಿವಿಧಾನಗಳೊಂದಿಗೆ ನೆರವೇರಿಸಲಾಯಿತು.

ಸಂತಾಪ: ಪ್ರಭಾಕರಗೌಡ್ರು ಅವರ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದ ಸಚಿವ ಎಸ್. ಮಧು ಬಂಗಾರಪ್ಪ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ, ಕುಟುಂಬಸ್ಥರಿಗೆ ಅವರ ಅಗಲಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿ ನೀಡಿಲಿ ಎಂದು ಸಂತಾಪ ಸೂಚಿಸಿದ್ದಾರೆ. ನಿಧನಕ್ಕೆ ವಿವಿಧ ರಾಜಕೀಯ ಮುಖಂಡರು ಹಾಗೂ ಗ್ರಾಮಸ್ಥರು ಸಂತಾಪ ವ್ಯಕ್ತಪಡಿಸಿದ್ದಾರೆ.

ವಿಜಯ ಸೌಹಾರ್ದ ಬ್ಯಾಂಕ್‌ನ ಶಾಖೆ ಉದ್ಘಾಟನೆ

19 ವರ್ಷಗಳ ಹಿಂದೆ ಸ್ಥಾಪಿತವಾದ ಸೌಹಾರ್ದ ಬ್ಯಾಂಕ್, 48 ಸಾವಿರ ಕೋಟಿ ರು. ವಹಿವಾಟು: ಮುರುಗೇಶ್ ನಿರಾಣಿ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ನಿರಾಣಿ ಸಮೂಹ ಸಂಸ್ಥೆಯ ವಿಜಯ ಸೌಹಾರ್ದ ಬ್ಯಾಂಕ್‌ನ 71ನೇ ಶಾಖೆ ಶಿವಮೊಗ್ಗ ನಗರದಲ್ಲಿ ಆರಂಭಗೊಂಡಿದೆ ಎಂದು ಸಂಸ್ಥೆಯ ಮಾಲೀಕ ಹಾಗೂ ಮಾಜಿ ಸಚಿವ ಮುರುಗೇಶ್ ನಿರಾಣಿ ತಿಳಿಸಿದರು.

ವಿಜಯ ಸೌಹಾರ್ದ ಬ್ಯಾಂಕ್‌ನ ಶಾಖೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ನಮ್ಮ ಸಮೂಹ ಸಂಸ್ಥೆಯ ಶಾಖೆಗಳು ಕಾರ್ಯ ನಿರ್ವಹಿಸುತ್ತಿದ್ದು, ವಿಶಾಲ ಸೌಹಾರ್ದ ಬ್ಯಾಂಕ್ 25 ಶಾಖೆಗಳು ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿವೆ ಎಂದು ಹೇಳಿದರು.

19 ವರ್ಷಗಳ ಹಿಂದೆ ಸ್ಥಾಪಿತವಾದ ನಮ್ಮ ಸೌಹಾರ್ದ ಬ್ಯಾಂಕ್ 48 ಸಾವಿರ ಕೋಟಿ ವಹಿವಾಟನ್ನು ನಡೆಸುತ್ತಿದೆ, ಕಳೆದ ವರ್ಷ 46 ಸಾವಿರ ಕೋಟಿ ವಹಿವಾಟು ನಡೆಸಿತ್ತು. ವರ್ಷದಿಂದ ವರ್ಷಕ್ಕೆ ನಮ್ಮ ವಹಿವಾಟು ಏರಿಕೆಯ ಹಾದಿಯಲ್ಲಿಯೇ ಸಾಗುತ್ತಿದೆ. ಕಳೆದ ವರ್ಷ 60 ಕೋಟಿ ಲಾಭವನ್ನು ಗಳಿಸಿದೆ. ಎನ್‌ಪಿಎ ಶೇ.1 ಕ್ಕಿಂತ ಕಡಿಮೆ ಇದೆ ಎಂದು ತಿಳಿಸಿದರು.

ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಇರುವಂತಹ ಎಲ್ಲಾ ಸೌಲಭ್ಯಗಳು ನಮ್ಮ ಬ್ಯಾಂಕಿನಲ್ಲೇ ಲಭ್ಯವಿದೆ. ಆದರೆ, ಗ್ರಾಹಕರಿಗೆ ಯಾವುದೇ ಸೇವಾಶುಲ್ಕ ವಿಧಿಸುವುದಿಲ್ಲ. ಜನಸ್ನೇಹಿಯಾಗಿ ನಮ್ಮ ಬ್ಯಾಂಕ್



ಶಿವಮೊಗ್ಗ ನಗರದಲ್ಲಿ ನಿರಾಣಿ ಸಮೂಹ ಸಂಸ್ಥೆಯ ವಿಜಯ ಸೌಹಾರ್ದ ಬ್ಯಾಂಕ್‌ನ ಶಾಖೆಯನ್ನು ಸಂಸದ ಬಿ.ವೈ. ರಾಘವೇಂದ್ರ ಉದ್ಘಾಟಿಸಿದರು. ಮಾಜಿ ಸಚಿವ ಮುರುಗೇಶ್ ನಿರಾಣಿ ಇತರರಿದ್ದರು.

ಇಲ್ಲಿಯವರೆಗೂ ಹಾಗೂ ಮುಂದೆಯೂ ಸಹ ಕಾರ್ಯ ನಿರ್ವಹಿಸಿಕೊಂಡು ಹೋಗಲಿದೆ. ಕರ್ನಾಟಕದಲ್ಲೇ ನಮ್ಮ ವಿಜಯ ಸೌಹಾರ್ದ ಕ್ರೆಡಿಟ್ ಸಹಕಾರಿ ಸಂಘ ಕರ್ನಾಟಕದಲ್ಲೇ ಪ್ರಥಮ ಸ್ಥಾನ ಪಡೆದ ಪ್ರತಿಷ್ಠಿತ ಸಹಕಾರಿ ಸಂಸ್ಥೆಯಾಗಿದೆ. ಮುಂದಿನ ದಿನಗಳಲ್ಲಿ 125 ಶಾಖೆಗಳನ್ನು ತೆರೆಯುವ ಗುರಿ ಹಾಕಿಕೊಳ್ಳಲಾಗಿದ್ದು, ಪ್ರಾರಂಭದಲ್ಲಿ 400 ಸದಸ್ಯರಿಂದ 10 ಲಕ್ಷ ರು. ಬಂಡವಾಳದಿಂದ ಪ್ರಾರಂಭವಾಗಿ ಪ್ರಸ್ತುತ 2 ಲಕ್ಷಕ್ಕೂ ಹೆಚ್ಚು ಸದಸ್ಯರನ್ನು ಹೊಂದಿದ್ದು, 21.60 ಕೋಟಿ ರು. ಶೇರು ಬಂಡವಾಳ ಹೊಂದಿದೆ. ಪ್ರತಿವರ್ಷ ಸದಸ್ಯರಿಗೆ ಶೇ.25ರಷ್ಟು ಲಾಭಾಂಶ ಹಂಚಿಕೆ ಮಾಡಿದ ಕರ್ನಾಟಕದ ಏಕೈಕ ಸಹಕಾರಿ ಸಂಘವಾಗಿದೆ. ಪ್ರದಾನ ಕಚೇರಿ ಸಹಿತ ಎಲ್ಲಾ ಶಾಖೆಗಳು ಗಣಕೀಕೃತಗೊಂಡು ಕೋರ್‌ಬ್ಯಾಂಕಿಂಗ್ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಗ್ರಾಹಕರಿಗೆ ಎಸ್‌ಎಂಎಸ್ ಸೌಲಭ್ಯ, ಠೇವುಗಳ ಮೇಲೆ ಆಕರ್ಷಕ ಬಡ್ಡಿದರ, ತ್ವರಿತ ಹಣ ವರ್ಗಾವಣೆಗಾಗಿ ಎನ್‌ಇಫ್‌ಟಿ/ಆರ್‌ಟಿಜಿಎಸ್ ಜೊತೆಗೆ ಸೌಹಾರ್ದ ಮಾದರಿಯಲ್ಲಿ ಪ್ರಥಮ ಬಾರಿಗೆ ಎಟಿಎಂ ಸೌಲಭ್ಯ ನೀಡುವುದರ ಜೊತೆಗೆ ಸದಸ್ಯರಿಗೆ ಜೀವವಿಮೆ ಮತ್ತು ಅಪಘಾತವಿಮೆ ಸೌಲಭ್ಯ ಕಲ್ಪಿಸಲಾಗಿದೆ. ಎಸ್ ಬ್ಯಾಂಕ್ ಸಹಯೋಗದೊಂದಿಗೆ ಸ್ವಂತ ಐಎಫ್‌ಎಸ್‌ಸಿ ಕೋಡ್ ಪಡೆದು ಗ್ರಾಹಕರಿಗೆ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯ ಒದಗಿಸಿದ ಹೆಗ್ಗಳಿಕೆ ನಮ್ಮ ಸಹಕಾರಿಗಿದೆ ಎಂದರು.

ಸಂಸದ ಬಿ.ವೈ.ರಾಘವೇಂದ್ರ ಜ್ಯೋತಿ ಬೆಳಗಿಸಿ ಸಂಸ್ಥೆಗೆ ಚಾಲನೆ ನೀಡಿದರು. ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಸೇರಿದಂತೆ ಅನೇಕ ಗಣ್ಯರು ಶುಭ ಹಾರೈಸಿದರು. ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್, ಎಸ್.ದತ್ತಾತ್ರಿ, ವಡ್ನಾಳ್ ರಾಜಣ್ಣ, ಓಂಕಾರಪ್ಪ, ಬಿಜೆಪಿ ಮಾಧ್ಯಮ ಪ್ರಮುಖ್ ಎಸ್. ಚಂದ್ರಶೇಖರ್, ಹಲವರಿದ್ದರು.

ಬಿಎಸ್‌ವೈ ಅಭಿಮಾನೋತ್ಸವಕ್ಕೆ ಭರದ ಸಿದ್ಧತೆ

ಮೇ 9 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವಕ್ಕೆ ಭರದ ಸಿದ್ಧತೆ ನಡೆದಿದ್ದು, 10ಲಕ್ಷಕ್ಕೂ ಹೆಚ್ಚು ಬಿಎಸ್‌ವೈ ಅಭಿಮಾನಿಗಳು ಭಾಗವಹಿಸಲಿದ್ದಾರೆ. ನಾವು ಕೂಡ ಕಳೆದ ಕೆಲವು ದಿನಗಳಿಂದ ಈ ಸಮಾವೇಶದ ಸಿದ್ಧತೆಯಲ್ಲಿ ಪಾಲ್ಗೊಂಡಿದ್ದೇವೆ. ಕರ್ನಾಟಕ ರಾಜ್ಯದ ಐತಿಹಾಸಿಕ ಅಭಿವೃದ್ಧಿಯಲ್ಲಿ ಮಹತ್ತರ ಪಾತ್ರ ವಹಿಸಿದ ಬಿಎಸ್‌ವೈ ಅಭಿಮಾನೋತ್ಸವಕ್ಕೆ ರಾಜ್ಯದ ಎಲ್ಲೆಡೆಯಿಂದ ಜನಸಾಗರ ಹರಿದುಬರಲಿದೆ. ದಾವಣಗೆರೆ ಮತ್ತು ಪಂಚರಾಜ್ಯಗಳ ಚುನಾವಣೆಗೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ ಸಾಮಾನ್ಯವಾಗಿ ಉಪಚುನಾವಣೆಗಳಲ್ಲಿ ಅಧಿಕಾರದಲ್ಲಿರುವ ಪಕ್ಷವೇ ಜಯಗಳಿಸುತ್ತದೆ. ಪಂಚರಾಜ್ಯಗಳ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಪುದುಚೆರಿ ಮತ್ತು ಅಸ್ಸಾಂನಲ್ಲಿ ಬಿಜೆಪಿ ಅಧಿಕಾರ ಗಳಿಸಿದೆ. ತನ್ನ ಓಟ್ ಷೇರನ್ನು ಹೆಚ್ಚಳ ಮಾಡಿಕೊಂಡಿದೆ. ಅದೇ ರೀತಿ ಕೇರಳ ಮತ್ತು ತಮಿಳುನಾಡಿನಲ್ಲೂ ಉತ್ತಮ ಸಾಧನೆ ತೋರಿದೆ. ಪಕ್ಷ ಸಂಘಟಿತವಾಗಿದ್ದು, ತನ್ನ ಬಲವನ್ನು ಹೆಚ್ಚಿಸಿ ಕೊಳ್ಳುತ್ತಿದ್ದು, ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಮತ್ತೆ ರಾಜ್ಯದಲ್ಲಿ ಅಧಿಕಾರ ಹಿಡಿಯಲಿದೆ ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ಹೇಳಿದರು.

ಪದೇಪದೇ ನಗರಸಭೆಗೆ ಜನರನ್ನು ಅಲೆಸಿದರೆ ಕ್ರಮ

ಸಾಗರದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಬೇಳೂರು ಗೋಪಾಲಕೃಷ್ಣ ಎಚ್ಚರಿಕೆ



ನಗರಸಭೆಯಲ್ಲಿ ಶಾಸಕರು ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

• **ಕನ್ನಡಪ್ರಭ ವಾರ್ತೆ** ಸಾಗರ

ಜನರ ಕೆಲಸ ಮಾಡಿ ಕೊಡದೆ ಪದೇಪದೇ ನಗರ ಸಭೆಗೆ ಜನರನ್ನು ಅಲೆಸಿದರೆ ನಿಮ್ಮ ಮೇಲೆ ಕ್ರಮ ಜರುಗಿಸುವುದು ಅನಿವಾರ್ಯ ಎಂದು ಶಾಸಕ ಗೋಪಾಲಕೃಷ್ಣ ಬೇಳೂರು ಎಚ್ಚರಿಕೆ ನೀಡಿದರು.

ಇಲ್ಲಿನ ನಗರಸಭೆಯಲ್ಲಿ ಶುಕ್ರವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಳೆದ ಎರಡೂವರೆ ವರ್ಷದಿಂದ ಈಸ್ವತ್ತು ಮಾಡಿ ಕೊಡದೆ ಸತಾಯಿಸುತ್ತಿದ್ದ ಕಂದಾಯ ನಿರೀಕ್ಷಕಿಯನ್ನು ತರಾಟೆಗೆ ತೆಗೆದುಕೊಂಡು, ಇನ್ನೊಮ್ಮೆ ಇಂತಹ ವಿಳಂಬನೀತಿ ಅನುಸರಿಸಿದರೆ ಸುಮ್ಮನಿರುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಮಾರ್ಕೆಟ್ ರಸ್ತೆ ಅಗಲೀಕರಣಕ್ಕೆ ಹಣ ಬಿಡುಗಡೆಯಾಗಿದೆ. ಆದರೆ ಕೆಲವರು ಜಾಗ ಬಿಡುತ್ತಿಲ್ಲ ಎನ್ನುವ ದೂರುಗಳಿವೆ. ಕಾನೂನು ಪ್ರಕಾರ ಅವರಿಗೆ ನೋಟಿಸ್ ನೀಡಿ, ಅದಕ್ಕೂ ಬಗ್ಗದೆ ಹೋದಲ್ಲಿ ದಂಡಂ ದಶಗುಣಂ ಎಂಬಂತೆ ಒಡೆದು ಹಾಕಿ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಳ್ಳಿ ಎಂದು ಸೂಚನೆ ನೀಡಿದ ಶಾಸಕರು, ಸಾಕಷ್ಟು ಬಾರಿ ರಸ್ತೆಗೆ ಜಾಗ ಕೊಡಿ ಎಂದು ಮನವಿ ಮಾಡಿದ್ದೇವೆ. ಇನ್ನು ಎಷ್ಟುದಿನ ಸಹಿಸಿಕೊಳ್ಳುವುದು. ಅಧಿಕಾರಿಗಳು ತಕ್ಷಣ ಕಾರ್ಯ ಪ್ರವೃತ್ತರಾಗಿ ಕೊನೆಬಾರಿಗೆ ಸ್ಥಳೀಯ ನಿವಾಸಿಗಳ ಮನವೊಲಿಸಿ ಎಂದು ಸೂಚಿಸಿದರು.

ಹಿಂದೆ ನಾನು ಶಾಸಕನಾಗಿದ್ದಾಗ ಒಳಚರಂಡಿ ಕಾಮಗಾರಿಗೆ 70 ಕೋಟಿ ರು. ಮಂಜೂರು ಮಾಡಿಸಲಾಗಿತ್ತು. ಈತನಕ ಕಾಮಗಾರಿ ಮುಗಿದಿಲ್ಲ. ಈ ಬಾರಿ ಮತ್ತೆ 35 ಕೋಟಿ ರು. ಹಣ ಮಂಜೂರು ಮಾಡಿಸಿದ್ದು, ತಕ್ಷಣ ಅಪೂರ್ಣ ಕಾಮಗಾರಿ ಪೂರ್ಣಗೊಳಿಸಿ ಎಂದ ಅವರು, ಟ್ಯಾಗೂರ್‌ಕಲ್ಚರಲ್ ಕಾಂಪ್ಲೆಕ್ಸ್‌ಗೆ 4.80 ಕೋಟಿ ರು. ಹಣ ಸಿದ್ಧವಿದ್ದು, ಶೀಘ್ರದಲ್ಲಿ ಕಲಾವಿದರು, ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಭೆ ಕರೆದು ರಂಗಮಂದಿರ ನಿರ್ಮಾಣ ಕುರಿತು ಚರ್ಚೆ ನಡೆಸಲಾಗುತ್ತದೆ ಎಂದು ಹೇಳಿದರು.

ಆಶ್ರಯ ನಿವೇಶನಕ್ಕೆ ಸಂಬಂಧಪಟ್ಟಂತೆ 20 ಎಕರೆ ಜಾಗ ಗುರುತಿಸಲಾಗಿದ್ದು, ಶೀಘ್ರ ಸರ್ಕಾರದಿಂದ ಮಂಜೂರಾತಿ ಪಡೆದು ನಿವೇಶನವಾಗಿ ಪರಿವರ್ತಿಸಿ ಫಲಾನುಭವಿಗಳಿಗೆ ಹಂಚಲಾಗುತ್ತದೆ. ಜನ್ನತ್ ನಗರದ ಇಕ್ಕೇರಿ ಅಘೋರೇಶ್ವರ ದೇವಸ್ಥಾನಕ್ಕೆ ಸೇರಿದ ಜಾಗದಲ್ಲಿ 136 ಕುಟುಂಬಗಳು ಅನೇಕ ವರ್ಷಗಳಿಂದ ಮನೆ ಕಟ್ಟಿಕೊಂಡಿದ್ದು, ಅವರಿಗೆ ಈಸ್ವತ್ತು ಸಿಗುತ್ತಿಲ್ಲ. ಇದರಿಂದ ಅವರು ಸರ್ಕಾರಿ ಸೌಲಭ್ಯ ಪಡೆಯಲು ಆಗುತ್ತಿಲ್ಲ ಎಂದು ತಮ್ಮ ಅಳಲು ತೋಡಿಕೊಂಡಿದ್ದಾರೆ. ತಕ್ಷಣ ಜಾಗದ ಸರ್ವೆ ನಡೆಸಿ ವರದಿ ನೀಡಿ, ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ ಆ ಕುಟುಂಬಗಳಿಗೆ ನ್ಯಾಯ ದೊರಕಿಸಿ ಕೊಡುವ ಕೆಲಸ ಮಾಡಲಾಗುತ್ತದೆ ಎಂದು ಹೇಳಿದರು.

ಉಪವಿಭಾಗಾಧಿಕಾರಿ ವಿರೇಶ್ ಕುಮಾರ್, ನಗರಸಭೆ ಯೋಜನಾಧಿಕಾರಿ ರಂಗಸ್ವಾಮಿ, ಪೌರಾಯುಕ್ತ ಎಚ್.ಕೆ.ನಾಗಪ್ಪ, ತಹಸೀಲ್ದಾರ್ ಪ್ರದೀಪ್, ಶಾಸಕರ ಆಪ್ತ ಕಾರ್ಯದರ್ಶಿಗಳಾದ ಶ್ರೀನಿವಾಸ್, ರಮೇಶ್ ಟಿ.ಪಿ., ಮದನ್, ಬಾಲಚಂದ್ರ, ಸುರೇಶ್ ಬಾಬು, ಗಣಪತಿ ಮಂಡಗಳಲೆ, ಮಧುಮಾಲತಿ, ಮಖ್ಬೂಲ್ ಇನ್ನಿತರರು ಹಾಜರಿದ್ದರು.

ಶಿವಮೊಗ್ಗ, ವಿಜಯನಗರದಲ್ಲಿ ಕಂಠೀರವ ಸ್ಟುಡಿಯೋ

ಜಮೀನು ಮಂಜೂರು ಮಾಡುವಂತೆ ಜಿಲ್ಲಾಧಿಕಾರಿ ಎನ್.ಹೇಮಂತ್ ಅವರೊಂದಿಗೆ ಚರ್ಚೆ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ಚಿತ್ರೀಕರಣದ ಚಟುವಟಿಕೆಗಳನ್ನು ವಿಕೇಂದ್ರೀಕರಿಸುವ ಮತ್ತು ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಶಿವಮೊಗ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಂಠೀರವ ಸ್ಟುಡಿಯೋಸ್‌ನ ನೂತನ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ ಎಂದು ಕಂಠೀರವ ಸ್ಟುಡಿಯೋಸ್ ಅಧ್ಯಕ್ಷ ಮೆಹಬೂಬ್ ಪಾಷ ತಿಳಿಸಿದರು.

ಶಿವಮೊಗ್ಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕಂಠೀರವ ಸ್ಟುಡಿಯೋಸ್ ಘಟಕ ಸ್ಥಾಪನೆಗೆ ಜಮೀನು ಮಂಜೂರು ಮಾಡುವಂತೆ ಜಿಲ್ಲಾಧಿಕಾರಿ ಎನ್. ಹೇಮಂತ್ ಅವರೊಂದಿಗೆ ಚರ್ಚಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಮೊಗ್ಗದಲ್ಲಿ ಕಂಠೀರವ ಸ್ಟುಡಿಯೋ ನಿರ್ಮಾಣಕ್ಕಾಗಿ ಸುಮಾರು 25 ಎಕರೆ ಜಮೀನು ಮಂಜೂರು ಮಾಡುವಂತೆ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗಿದೆ. ಈ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳು ಈಗಾಗಲೇ ಪತ್ರ ಬರೆದಿದ್ದು, ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ವಿಕೇಂದ್ರೀಕರಣದ ಉದ್ದೇಶ: ಪ್ರಸ್ತುತ ಚಿತ್ರೀಕರಣದ ಚಟುವಟಿಕೆಗಳು ಕೇವಲ ಬೆಂಗಳೂರಿಗೆ ಸೀಮಿತವಾಗಿವೆ. ಇದರಿಂದ ಅಲ್ಲಿ ಜಾಗದ ಕೊರತೆ ಎದುರಾಗುತ್ತಿದ್ದು, ಇತರೆ ಜಿಲ್ಲೆಗಳಿಗೂ ಈ ಸೌಲಭ್ಯಗಳನ್ನು ವಿಸ್ತರಿಸುವುದರಿಂದ ಆ ಭಾಗದ ಕಲೆ, ಸಂಸ್ಕೃತಿ ಮತ್ತು ಕಲಾವಿದರಿಗೆ ಹೆಚ್ಚಿನ ಉತ್ತೇಜನ ಸಿಗಲಿದೆ ಎಂದರು.

ಶಿವಮೊಗ್ಗ ಆಯ್ಕೆಗೆ ಕಾರಣ: ಜಿಲ್ಲೆಯು ನೈಸರ್ಗಿಕ ಸೌಂದರ್ಯದಿಂದ ಕೂಡಿದ್ದು, ಹೊರಾಂಗಣ ಚಿತ್ರೀಕರಣಕ್ಕೆ ಅತ್ಯಂತ ಸೂಕ್ತವಾಗಿದೆ. ಅಲ್ಲದೆ ಕಾರವಾರ, ಉಡುಪಿ, ಮಂಗಳೂರು ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಇದು ಹತ್ತಿರವಾಗಿರುವುದರಿಂದ ಚಿತ್ರೀಕರಣಕ್ಕೆ ಪೂರಕವಾದ ವಾತಾವರಣವಿದೆ ಎಂದರು.

ಶಿವಮೊಗ್ಗ ತಾಲೂಕಿನ ಹಾರನಹಳ್ಳಿ ಹೋಬಳಿಯ ಜಾಜುಹಳ್ಳಿ ಗ್ರಾಮದಲ್ಲಿ ಲಭ್ಯವಿರುವ ಜಮೀನಿನಲ್ಲಿ 25 ಎಕರೆ ಜಮೀನನ್ನು ನೀಡುವಂತೆ ಕೋರಲಾಗಿದೆ.

ಆಧುನಿಕ ಸೌಲಭ್ಯಗಳು: ಲ್ಯಾಬ್ ಡೆವಲಪ್‌ಮೆಂಟ್‌ನಂತಹ ಅತ್ಯಾಧುನಿಕ ತಂತ್ರಜ್ಞಾನದ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಹೇಳಿದರು.

ವಜ್ರಮಹೋತ್ಸವದ ಸ್ಮರಣೆ: ಬೆಂಗಳೂರಿನ ಕಂಠೀರವ ಸ್ಟುಡಿಯೋ ಸ್ಥಾಪನೆಯಾಗಿ 60 ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ, ಅದರ ವಜ್ರಮಹೋತ್ಸವದ ನೆನಪಿಗಾಗಿ ಈ ವಿಸ್ತರಣಾ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಈ ಯೋಜನೆಯ ಕುರಿತು ಈಗಾಗಲೇ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದ್ದು, ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.

ಉದ್ಘಾಟನೆ | ವೈದ್ಯ ಡಾ. ಎಂ.ಕೆ. ಭಟ್ ಅಭಿಮತ | ಕಸಾಪದ 112ನೇ ವರ್ಷದ ಸಂಸ್ಥಾಪನಾ ದಿನಾಚರಣೆ

ಸಂಸ್ಕೃತಿ ಬೆಳೆಸಲು ಕಸಾಪ ಕೊಡುಗೆ ಅಪಾರ

• **ಕನ್ನಡಪ್ರಭ ವಾರ್ತೆ** ಸೊರಬ

ಕನ್ನಡ ನಾಡು, ನುಡಿ, ಸಂಸ್ಕೃತಿ, ಕಲೆಗಳನ್ನು ಉಳಿಸಿ ಬೆಳೆಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕೊಡುಗೆ ಅಪಾರ. ಜಿಲ್ಲೆ, ತಾಲೂಕು, ಹೋಬಳಿ ಘಟಕಗಳಲ್ಲಿಯೂ ಸಾಹಿತ್ಯ ಪರಿಷತ್ ನಿರಂತರವಾಗಿ ಕನ್ನಡಪರ ಚಟುವಟಿಕೆಗಳನ್ನು ನಡೆಸುತ್ತಾ ಬಂದಿದೆ. ಆದರೆ ಸಾರ್ವಜನಿಕರು ನಮ್ಮ ನೆಲದ ಭಾಷೆಯಾದ ಕನ್ನಡದ ಬಗ್ಗೆ, ಕನ್ನಡಪರ ಕಾರ್ಯಕ್ರಮಗಳಲ್ಲಿ ಭಾಗವಹಿಸುವವರ ಸಂಖ್ಯೆ ನೋಡಿದರೆ ಬೇಸರವಾಗುತ್ತಿದೆ ಎಂದು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ವೈದ್ಯ ಡಾ. ಎಂ.ಕೆ. ಭಟ್ ಹೇಳಿದರು.

ಪಟ್ಟಣದ ಕನ್ನಡ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್‌ನ 112ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್‌ನ ಹುಟ್ಟು, ಬೆಳವಣಿಗೆ ಕುರಿತು ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಉಪನ್ಯಾಸಕಿ ಎ.ವಿ. ಪವಿತ್ರಾ ಉಪನ್ಯಾಸ ನೀಡಿ, ಕನ್ನಡ ಸಾಹಿತ್ಯ ಪರಿಷತ್ತು ನಾಡಿನ ಏಕೀಕರಣದ ಹೋರಾಟಗಾರರು, ಸಾಹಿತಿಗಳು, ವಿದ್ವಾಂಸರು, ಮೈಸೂರಿನ ನಾಲ್ವಡಿ ಕೃಷ್ಣರಾಜ ಒಡೆಯರ್, ಎಚ್.ವಿ. ನಂಜುಂಡಯ್ಯ, ಗಂಗಾಧರರಾವ್ ದೇಶಪಾಂಡೆ, ಆಲೂರು ವೆಂಕಟರಾಯರು, ಸರ್‌ಎಂ. ವಿಶ್ವೇಶ್ವರಯ್ಯ, ಕುವೆಂಪು ಸೇರಿದಂತೆ ಅಧ್ಯಾಪಕರು, ಸಾರ್ವಜನಿಕ ಗಣ್ಯರು ಹೀಗೆ ಹಲವಾರು ಗಣ್ಯ ವ್ಯಕ್ತಿಗಳ ನಾಡು, ನುಡಿ ಸೇವಕರ ಗುಂಪಿನ ಶ್ರಮ ತ್ಯಾಗಗಳ ಫಲವಾಗಿ ರೂಪಗೊಂಡಿದ್ದೇ ಕನ್ನಡ ಸಾಹಿತ್ಯ ಪರಿಷತ್ತು ಎಂದರು.

ಸೊರಬ ತಾಲೂಕಿನಲ್ಲಿ ಏಳುನೂರು ಜನ ಆಜೀವ ಸದಸ್ಯರಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಆಜೀವ ಸದಸ್ಯರಾಗಬೇಕು. ಆ ಮೂಲಕ ಪರಿಷತ್ತನ್ನು ಉಳಿಸಿ ಬೆಳೆಸಲು ಮುಂದಾಗಬೇಕು. ಇದರಿಂದ ನಾಡಿನ ಭಾಷೆ, ಸಂಸ್ಕೃತಿ ಇತಿಹಾಸ, ಪರಂಪರೆ ಉಳಿಸಲು ಸಾಧ್ಯ. ಈ ನಿಟ್ಟಿನಲ್ಲಿ ಸೊರಬ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಷಣ್ಮುಖಾಚಾರ್‌ಮತ್ತು ಅವರ ತಂಡವು ಅತ್ಯುತ್ತಮ ಕೆಲಸ ಮಾಡುತ್ತಿದೆ ಎಂದರು.



ಸೊರಬ ಪಟ್ಟಣದ ಕನ್ನಡ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್‌ನ 112ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಡಾ. ಎಂ.ಕೆ. ಭಟ್ ಉದ್ಘಾಟಿಸಿ ಮಾತನಾಡಿದರು. ಶಿವಾನಂದ ಎಸ್. ಬಿಳಗಿ, ಎಸ್.ಆರ್. ಕುಮಾರಸ್ವಾಮಿ, ಗುರುಮೂರ್ತಿ ಇತರರಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿಕಟಪೂರ್ವ ಅಧ್ಯಕ್ಷರಾದ ಶಿವಾನಂದ ಪಾಣಿ, ಮಾಜಿ ಅಧ್ಯಕ್ಷ ಮಧುರಾಯ್ ಜಿ. ಶೇಟ್ ಮಾತನಾಡಿದರು.

ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಷಣ್ಮುಖಾಚಾರ್ ಮಾತನಾಡಿ, ಕನ್ನಡ ಕಟ್ಟುವ ಕೆಲಸ ಅಷ್ಟು ಸುಲಭವಲ್ಲ. ಸಾರ್ವಜನಿಕರನ್ನು ಒಳಗೊಂಡ ಅನೇಕ ಕಾರ್ಯಕ್ರಮಗಳನ್ನು ನಡೆಸಿದ್ದೇವೆ. ಕಣಹಬ್ಬ, ಆಲೆಮನೆ ಹಬ್ಬ, ಸಾಹಿತ್ಯ ಸಮ್ಮೇಳನ, ತಾಲೂಕು ಮತ್ತು ಜಿಲ್ಲಾ ಮಟ್ಟದ ಕಥೆ, ಕವಿಗೋಷ್ಠಿಗಳು, ಮನೆಯಂಗಳದಲ್ಲಿ ಸಾಹಿತ್ಯ ಸಂಭ್ರಮ, ಬೃಹತ್ ಆಹಾರ ಮೇಳಗಳು ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಸಾರ್ವಜನಿಕರನ್ನು ಒಳಗೊಂಡು ಯಶಸ್ವಿಯಾಗಿ ನಡೆಸುತ್ತಾ ಬಂದಿದ್ದೇವೆ. ಆದರೆ ಸಾರ್ವಜನಿಕರು ನಿರೀಕ್ಷಿತ ಮಟ್ಟದಲ್ಲಿ ಕನ್ನಡಪರ ಚಟುವಟಿಕೆಗಳಲ್ಲಿ ಭಾಗವಹಿಸದಿರುವುದು ಆತಂಕದ ಸಂಗತಿ ಎಂದರು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರಾದ ಶಿವಾನಂದ ಎಸ್. ಬಿಳಗಿ, ಎಸ್.ಆರ್. ಕುಮಾರಸ್ವಾಮಿ, ತಾಲೂಕು ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಗುರುಮೂರ್ತಿ, ನಿವೃತ್ತ ನೌಕರ ಸಂಘದ ಅಧ್ಯಕ್ಷ ಕಲ್ಲಪ್ಪ ಚಿತ್ರಟ್ಟೆಹಳ್ಳಿ, ಪರಿಷತ್ ಹಿರಿಯ ಸದಸ್ಯರು, ಶಿಕ್ಷಕಿ ಕೆ.ಇ. ಸುನಂದ, ಸಮಾಜ ಸೇವಕ ರಾಜು ಹಿರಿಯಾವಲಿ ಮೊದಲಾದವರು ಹಾಜರಿದ್ದರು.

ರಾಜ್ಯದಲ್ಲಿ ತಾಪಮಾನ ಡಿಗ್ರಿ ಸೆಲ್ಸಿಯಸ್‌ಗಳಲ್ಲಿ

	ಕಲಬುರಗಿ	ಬೀದರ್	ರಾಯಚೂರು	ಚಿತ್ರದುರ್ಗ	ವಿಜಯಪುರ
ಗರಿಷ್ಠ	39.8	38.4	37.6	36.4	36.0
ಕನಿಷ್ಠ	26.2	22.6	27.0	23.1	22.5

11 ಜಿಲ್ಲೇಲಿ ಕ್ವಿಂಟಲ್‌ಗೆ ₹7721ರಂತೆ ಸೂರ್ಯಕಾಂತಿ ಖರೀದಿಗೆ ಆದೇಶ

ಬೆಂಗಳೂರು: ಬೆಂಬಲ ಬೆಲೆ ಯೋಜನೆ ಅಡಿ 2025-26ನೇ ಸಾಲಿನ ಹಿಂಗಾರು ಹಂಗಾಮಿನ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಲ್‌ಗೆ 7,721 ರು. ದರದಲ್ಲಿ ಖರೀದಿಗೆ ಸಚಿವ ಶಿವಾನಂದ ಪಾಟೀಲ ಆದೇಶ ಮಾಡಿದ್ದಾರೆ. ಕೇಂದ್ರ ಸರ್ಕಾರದ



ಬೆಂಬಲ ಬೆಲೆ ಮಾರ್ಗಸೂಚಿಗಳ ಅನ್ವಯ ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ, ರಾಯಚೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ದೇಶನ ನೀಡಿದ್ದಾರೆ. ನಾಫೆಡ್ ಮತ್ತು ಎನ್‌ಸಿಸಿಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ಹಾಗೂ ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾ ಮಂಡಳವನ್ನು ರಾಜ್ಯ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ನೇಮಿಸಲಾಗಿದೆ.

ನವಜಾತ ಶಿಶುಗಳಲ್ಲಿನ ಜನ್ಮಜಾತ ಮೆಟಬಾಲಿಕ್ ಕಾಯಿಲೆ ಪತ್ತೆಗೆ ಆದೇಶ

ಬೆಂಗಳೂರು: ನವಜಾತ ಶಿಶುಗಳಲ್ಲಿ ಜನ್ಮಜಾತವಾಗಿರುವ ಅಪರೂಪದ ಮೆಟಬಾಲಿಕ್ (ಚಯಾಪಚಯ) ಕಾಯಿಲೆಗಳನ್ನು ಪತ್ತೆ ಹಚ್ಚಲು ಬೆಂಗಳೂರು ನಗರ, ಗ್ರಾಮಾಂತರ ಹಾಗೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಸಾರ್ವತ್ರಿಕ ನವಜಾತ ಶಿಶು ತಪಾಸಣೆ ಯೋಜನೆ ಅನುಷ್ಠಾನಕ್ಕೆ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ. ನವಜಾತ ಶಿಶುಗಳಲ್ಲಿ ಜನ್ಮಜಾತ ಹೈಪೋಥೈರಾಯ್ಡಿಸಮ್, ಅಡ್ರಿನಲ್ ಹೈಪರ್‌ಲಾಸಿಯಾ (ಸಿಎಎಚ್), ಗ್ಯಾಲಕ್ಟೋಸೀಮಿಯಾ, ಫಿನೈಲೈಟೋನೂರಿಯಾ ಮತ್ತು ಮೆಟಬಾಲಿಕ್ ಅಸ್ವಸ್ಥೆಗಳನ್ನು ಪತ್ತೆ ಹಚ್ಚಲು ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ 2.58 ಕೋಟಿ ರು.ಗಳನ್ನು ಎನ್‌ಎಚ್‌ಎಂ ಅಡಿ ಒದಗಿಸಲಾಗಿದೆ. ತುಮಕೂರು, ಬಳ್ಳಾರಿ, ಚಿತ್ರದುರ್ಗ, ವಿಜಯನಗರ ಜಿಲ್ಲೆಗಳಿಗೆ 2.79 ಕೋಟಿ ರು. ಅನುದಾನ ನೀಡಲಾಗಿದೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳದಲ್ಲಿ 5.58 ಕೋಟಿ ರು. ವೆಚ್ಚದಲ್ಲಿ ಪರೀಕ್ಷೆಗೆ ಇಲಾಖೆ ಸೂಚಿಸಿದೆ.

ಪೆನ್ನಾರ್ ನೀರು ನ್ಯಾಯಾಧಿಕರಣ ಸ್ಥಾಪನೆಗಾಗಿ 5 ತಿಂಗಳ ಅವಕಾಶ

ನವದೆಹಲಿ: ಕರ್ನಾಟಕ, ತಮಿಳುನಾಡು, ಕೇರಳ ರಾಜ್ಯಗಳಲ್ಲಿ ಹರಿಯುವ ಪೆನ್ನಾರ್ ನದಿ ನೀರು ಹಂಚಿಕೆ ಸಂಬಂಧ ನ್ಯಾಯಾಧಿಕರಣ ಸ್ಥಾಪನೆಗೆ ಸೆಪ್ಟೆಂಬರ್ ವರೆಗೂ ಕಾಲಾವಕಾಶ ನೀಡಿ ಆದೇಶ ಹೊರಡಿಸಿದೆ. ಪೆನ್ನಾರ್‌ನದಿ ನೀರು ಹಂಚಿಕೆ ಸಂಬಂಧ ಅರ್ಜಿಯು ನ್ಯಾ.ವಿಕ್ರಮನಾಥ್ ನೇತೃತ್ವದ ದ್ವಿಸದಸ್ಯ ಪೀಠದಲ್ಲಿ ವಿಚಾರಣೆಗೆ ಬಂದಿತ್ತು. ಈ ಹಿಂದಿನ ವಿಚಾರಣೆಯಲ್ಲಿ ಇನ್ನೊಂದು ತಿಂಗಳಿನಲ್ಲಿ ನ್ಯಾಯಾಧಿಕರಣ ಸ್ಥಾಪನೆ ಮಾಡುವಂತೆ ಸುಪ್ರೀಂಕೋರ್ಟ್ ಸೂಚಿಸಿತ್ತು. ಶುಕ್ರವಾರ ವಿಚಾರಣೆ ನಡೆಸಿದ ನ್ಯಾಯಪೀಠದ ಎದುರು ಕೇಂದ್ರ ಜಲಶಕ್ತಿ ಸಚಿವಾಲಯ ಪರ ವಕೀಲರು ಹಾಜರಾಗಿ ಹೆಚ್ಚಿನ ಸಮಯ ಕೋರಿದರು. ಒಂದು ತಿಂಗಳಲ್ಲಿ ನ್ಯಾಯಧಿಕರಣ ಸ್ಥಾಪನೆ ಸಾಧ್ಯವಿಲ್ಲ. ಸಚಿವ ಸಂಪುಟ ಅನುಮೋದನೆಯಾಗಬೇಕು. ನ್ಯಾಯಮಂಡಳಿಯ ಅಧ್ಯಕ್ಷರ ನೇಮಕವಾಗಬೇಕು. ಈ ಪ್ರಕ್ರಿಯೆ ಪೂರ್ಣಗೊಳ್ಳಲು ಆರು ತಿಂಗಳ ಸಮಯಬೇಕು ಎಂದು ಕೋರಿದರು. ಕೇಂದ್ರ ಸರ್ಕಾರದ ಮನವಿಗೆ ಸುಪ್ರೀಂ ಕೋರ್ಟ್ ಒಪ್ಪಿಗೆ ಸೂಚಿಸಿತು.

ಕೊಟ್ಟ ಹಣ ವಾಪಸ್ ಕೇಳಿದ ವೃದ್ಧೆಯ ಕೊಂದು ಶೌಚ ಗುಂಡೀಲಿ ಹೂತಿಟ್ಟ

